
ಯುವ ಸ್ಫೂರ್ತಿ



"ನಮ್ಮ ಮುಖ್ಯ ಧರ್ಮವೇ ಕರ್ಮ. ನಾವು ಯಾವ ಕೆಲಸವನ್ನೂ ಕಡಿಮೆ ಪ್ರಾಧಿಕೃತರಾಗಿ ಮಾಡಕೂಡದು."
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 202 | ಸೋಮವಾರ : 26–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 202 | MONDAY : 26–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ವಿಶ್ವದಲ್ಲೇ ನಾಲ್ಕನೇ ಅತೀ ದೊಡ್ಡ ಆರ್ಥಿಕ ರಾಷ್ಟ್ರವಾದ ಭಾರತ

**ನವದೆಹಲಿ, ಮೇ26–** ಒಂದು ಕಾಲದಲ್ಲಿ ವಿಶ್ವಸಂಸ್ಥೆ ( ಯುಎನ್‌ಒ) ನೀಡುವ ಆಹಾರ ಧಾನ್ಯಗಳಿಗೆ ಕೈಯೊಡ್ಡಿ, ಹೊಟ್ಟೆ ತುಂಬಿಸಿಕೊಳ್ಳಬೇಕಾದ ಸ್ಥಿತಿಯಲ್ಲಿದ್ದ ಭಾರತ ಇಂದು ವಿಶ್ವದಲ್ಲೇ ನಾಲ್ಕನೇ ಅತೀ ದೊಡ್ಡ ಆರ್ಥಿಕ ರಾಷ್ಟ್ರವಾಗಿ ಹೊರಹೊಮ್ಮಿದೆ.

ದೇಶದ ಜಿಡಿಪಿ 4 ಟ್ರಿಲಿಯನ್ ಗಡಿ ತಲುಪಿದ್ದು, ಗಾತ್ರದಲ್ಲಿ ಅಮೆರಿಕ, ಚೀನಾ ಮತ್ತು ಜರ್ಮನಿಗಿಂತ ಹಿಂದಿದೆ. ಜಾಗತಿಕ ಆರ್ಥಿಕ ಶ್ರೇಯಾಂಕದಲ್ಲಿ ಭಾರತ, ಜಪಾನ್ ಅನ್ನು ಹಿಂದಿಕ್ಕಿ ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕ ದೇಶವಾಗಿ ವಿಶ್ವದ ದೊಡ್ಡಣ್ಣ ಅಮೇರಿಕಾ ಹಾಗೂ ಚೀನಾಕ್ಕೂ ಪ್ರಬಲ ಪೈಪೋಟಿ ನೀಡುವಷ್ಟು ಶಕ್ತಿಶಾಲಿಯಾಗಿದೆ.

ಈ ಮಾಹಿತಿಯನ್ನು ನೀತಿ ಆಯೋಗದ ಸಿಇಒ ಬಿವಿಆರ್ ಸುಬ್ರಹ್ಮಣ್ಯಂ ಬಹಿರಂಗಪಡಿಸಿದ್ದಾರೆ.

ನೀತಿ ಆಯೋಗದ 10ನೇ ಆಡಳಿತ ಮಂಡಳಿಯ ಸಭೆಯ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿ, ಭಾರತದ ಆರ್ಥಿಕತೆ ಈಗ 4 ಟ್ರಿಲಿಯನ್ ಡಾಲರ್ ಆಗಿದೆ. ಭಾರತ ಈಗ ಜಪಾನ್ ಗಿಂತ ದೊಡ್ಡ ಆರ್ಥಿಕತೆ ಹೊಂದಿದೆ. ಇದಕ್ಕೆ ಅನುಕೂಲಕರವಾದ ಭೌಗೋಳಿಕ ರಾಜಕೀಯ ಹಾಗೂ ಆರ್ಥಿಕ ಪರಿಸ್ಥಿತಿಗಳೂ ಕಾರಣ ಎಂದು ಮಾಹಿತಿ ನೀಡಿದ್ದಾರೆ.ಆರ್ಥಿಕ ಮತ್ತು ಜಾಗತಿಕ ರಾಜಕೀಯ



ವಾತಾವರಣವು ಭಾರತಕ್ಕೆ ಅನು ಕೂಲಕರವಾಗಿದೆ. ಇತ್ತೀಚೆಗೆ ಬಿಡುಗಡೆಯಾದ ಐಎಂಎಫ್‌ನ ದತ್ತಾಂಶವನ್ನು ಉಲ್ಲೇಖಿಸಿದ ಅವರು, ಭಾರತ 4 ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗಿರುವುದನ್ನು ಹೇಳಿದ್ದಾರೆ.

ಆಪಲ್‌ನ ಐಫೋನ್ ಅನ್ನು ಅಮೆರಿಕದಲ್ಲಿ ತಯಾರಿಸದೇ ಹೋದರೆ ಅದಕ್ಕೆ ಶೇ. 25ರಷ್ಟು ಟ್ಯಾರಿಫ್ ಹಾಕುವುದಾಗಿ ಡೊನಾಲ್ಡ್ ಟ್ರಂಪ್ ಹಾಕಿರುವ ಬೆದರಿಕೆಯನ್ನು ಭಾರತದ ನೀತಿ ಆಯೋಗ್ ಸಿಇಒ ತಳ್ಳಿಹಾಕಿದ್ದಾರೆ. ಟ್ಯಾರಿಫ್ ಕ್ರಮ ಇನ್ನೂ ಅನಿಶ್ಚಿತ ಎನಿಸಿದೆ. ಈಗಿರುವ ಅಂಶಗಳನ್ನು ಗಮನಿಸಿದರೆ ಐಫೋನ್ ತಯಾರಿಕೆಯ ವೆಚ್ಚ ಭಾರತದಲ್ಲಿ ಅಗ್ಗ ಎನಿಸುತ್ತದೆ. ಅಮೆರಿಕ ಬಿಟ್ಟು ಭಾರತದಲ್ಲಾಗಲೀ ಅಥವಾ ಬೇರೆಲ್ಲಿಯಾಗಲೀ ತಯಾರಿಸುವ ಫೋನ್ ಗಳ ಮೇಲೆ ಶೇ.25ರಷ್ಟು ಟ್ಯಾರಿಫ್ ಹಾಕುತ್ತೇವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಪಲ್ ಹಾಗೂ ಸ್ಯಾಕ್ಸಿಂಗ್ ಕಂಪನಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

ಕೆಲ ವರ್ಷಗಳ ಹಿಂದಿನವರೆಗೂ ಶೇ. 95 ಐಫೋನ್‌ಗಳನ್ನು ಚೀನಾದಲ್ಲಿ ತಯಾರಿಸುತ್ತಿದ್ದ ಆಪಲ್ ಕಂಪನಿ ಈಗ ಭಾರತದಲ್ಲಿ ತನ್ನ ತಯಾರಿಕೆ ಸೌಲಭ್ಯ ವಿಸ್ತರಿಸುತ್ತಾ ಬಂದಿದೆ. ಈಗ ಹೆಚ್ಚ ಕಡಿಮೆ ಶೇ. 20ರಷ್ಟು ಐಫೋನ್‌ಗಳು ಭಾರತದಲ್ಲಿ ಮ್ಯಾನುಫ್ಯಾಕ್ಚರ್ ಆಗುತ್ತಿವೆ. ಸ್ಯಾಂಗ್ ಕಂಪನಿಯೂ ಕೂಡ ಭಾರತದಲ್ಲಿ ತನ್ನ ಹಲವು ಫೋನ್ ಗಳನ್ನು ತಯಾರಿಸುತ್ತಿವೆ. ಸ್ಮಾರ್ಟ್ ಫೋನ್ ತಯಾರಿಕೆಯು ಭಾರತದಲ್ಲಿ ಬಹಳ ದೊಡ್ಡ ಉದ್ಯಮವಾಗಿ ಬೆಳೆದಿದೆ.

ದೇಶೀಯ ಸುಧಾರಣೆಗಳು ಮತ್ತು ಭಾರತದ ಪರವಾಗಿ ಹೆಚ್ಚು ಹೆಚ್ಚು ಒಲವು ತೋರುತ್ತಿರುವ ಜಾಗತಿಕ ವಾತಾವರಣದ ಸಂಯೋಜನೆಯೇ ಈ ಏರಿಕೆಗೆ ಕಾರಣ.ನಾನು ಮಾತನಾಡುತ್ತಿರುವಂತೆ, ನಾವು ಈಗ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿದ್ದೇವೆ. ನಾವು 4 ಟ್ರಿಲಿಯನ್ ಆರ್ಥಿಕತೆಯನ್ನು ತಲುಪಿದ್ದೇವೆ ಎಂದು ಅವರು ತಿಳಿಸಿದರು,ಭಾರತದ ಆರ್ಥಿಕ ಏರಿಕೆಯನ್ನು ಒತ್ತಿಹೇಳಲು ಇತ್ತೀಚಿನ ಆರ್ಥಿಕ ಬೆಳವಣಿಗೆಗಳ ಅಂದಾಜುಗಳನ್ನು ಉಲ್ಲೇಖಿಸಿದರು.ಯುಎಸ್, ಚೀನಾ ಮತ್ತು ಜರ್ಮನಿ ಮಾತ್ರ ನಮಗಿಂತ ಮುಂದಿವೆ. ನಾವು ನಮ್ಮ ಹಾದಿಯಲ್ಲಿಯೇ ಮುಂದುವರಿದರೆ, ಕೇವಲ 2.5 ರಿಂದ 3 ವರ್ಷಗಳಲ್ಲಿ ನಾವು ಮೂರನೇ ಅತಿದೊಡ್ಡ ರಾಷ್ಟ್ರವಾಗಬಹುದು. ಭಾರತವು ಪ್ರಮುಖ ಪರ್ಯಾಯ ಉತ್ಪಾದನಾ ಕೇಂದ್ರವಾಗಿ ತನ್ನನ್ನು ತಾನು ಸ್ಥಾನೀಕರಿಸಿಕೊಳ್ಳುತ್ತಿರುವ ಜಾಗತಿಕ ಆರ್ಥಿಕ ಭೂದೃಶ್ಯದ ವಿಕಸನದ ಮಧ್ಯೆ ಈ ಮೈಲಿಗಲ್ಲು ಬಂದಿದೆ.

ಇತ್ತೀಚೆಗೆ ಅಮೆರಿಕದಲ್ಲಿ ಮಾರಾಟವಾಗುವ ಐಫೋನ್ ಗಳನ್ನು ಭಾರತದಂತಹ ದೇಶಗಳಲ್ಲಿ ತಯಾರಿಸುವ ಬದಲು ದೇಶೀಯವಾಗಿ ತಯಾರಿಸಬೇಕು ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಕ್ಕೆ ಸುಬ್ರಹ್ಮಣ್ಯಂ ಪ್ರತಿಕ್ರಿಯಿಸಿದರು. ಭವಿಷ್ಯದ ಯುಎಸ್ ಸುಂಕಗಳ ನಿರ್ದಿಷ್ಟತೆಗಳು ಸ್ಪಷ್ಟವಾಗಿಲ್ಲ, ಆದರೆ ಆ ಚಲನಶೀಲತೆಯನ್ನು ಲೆಕ್ಕಿಸದೆ ಭಾರತವು ವೆಚ್ಚ-ಸ್ಪರ್ಧಾತ್ಮಕ ಉತ್ಪಾದನಾ ನೆಲೆಯನ್ನು ನೀಡುವುದನ್ನು ಮುಂದುವರಿಸುತ್ತದೆ. ಆಸ್ತಿ ಹಣಗಳಿಸುವ ಉಪಕ್ರಮಗಳ ಹೊಸ ಅಲೆಯು ಪೈಪ್‌ಲೈನ್‌ನಲ್ಲಿದೆ ಎಂದು ಅವರು ಬಹಿರಂಗಪಡಿಸಿದರು.

ಸರ್ಕಾರವು ತನ್ನ ಆಸ್ತಿ ಹಣಗಳಿಸುವ ಕಾರ್ಯಕ್ರಮದ ಎರಡನೇ ಸುತ್ತನ್ನು ಸಿದ್ಧಪಡಿಸುತ್ತಿದೆ, ಇದನ್ನು ಆಗಸ್ಟ್‌ನಲ್ಲಿ

2ನೇ ಪುಟಕ್ಕೆ

## ಅಕ್ರಮ ಕಲ್ಲು ಗಣಿಗಾರಿಕೆ ವಿರುದ್ಧ ಮೇ 27ಕ್ಕೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ: ಜಾವೇದ್ ಖಾನ್

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.26–** ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಕಲ್ಲು ಗಣಿಗಾರಿಕೆ ತಡೆಯುವಲ್ಲಿ ವಿಫಲರಾದ ಜಿಲ್ಲಾಡಳಿತ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳ ನಡೆಯನ್ನು ಖಂಡಿಸಿ, ಮೇ 27 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಜನಸೇವಾ ಫೌಂಡೇಶನ್ ಮತ್ತು ರಾಜ್ಯದ ವಿವಿಧ ದಲಿತಪರ ಸಂಘಟನೆಗಳ ಸಹಯೋಗದೊಂದಿಗೆ ಅನಿರ್ದಿಷ್ಟಾವಧಿಯ



ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಜನಸೇವಾ ಫೌಂಡೇಶನ್ ರಾಜ್ಯಾಧ್ಯಕ್ಷ ಜಾವೇದ್ ಖಾನ್ ತಿಳಿಸಿದರು.

ಮಾನ್ವಿ ಪಟ್ಟಣದ ಪತ್ರಿಕಾ ಭವನದಲ್ಲಿ ಮಾತನಾಡಿದ ಅವರು, ಮಾನ್ವಿ ಪಟ್ಟಣದಲ್ಲಿ ಕಳೆದ ಹಲವು ವರ್ಷಗಳಿಂದ ಅಕ್ಬರ್ ಪಾಷಾ ಎಂಬುವವರು ಹಿಂದೂಸ್ಥಾನ ಸ್ಟೋನ್ ಕ್ರಷರ್ ಮೂಲಕ ಜನವಸತಿ ಪ್ರದೇಶಗಳಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಸ್ಫೋಟಕಗಳನ್ನು ಬಳಸುತ್ತಿದ್ದಾರೆ. ಇದರಿಂದ ಸುತ್ತಮುತ್ತಲಿನ ಮನೆಗಳಿಗೆ ಹಾನಿಯಾಗುತ್ತಿದೆ. ಪರವಾನಿಗೆ ಪಡೆದಿರುವುದಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ರಾಜ್ಯ ಸರ್ಕಾರಕ್ಕೆ ರಾಜಸ್ವ ವಂಚಿಸಿ, ನಿಯಮಗಳನ್ನು ಮೀರಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವ ಬಗ್ಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆ, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳಿಗೆ ಅನೇಕ ಬಾರಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಖಾನ್ ಆರೋಪಿಸಿದರು.

ಅಕ್ಬರ್ ಪಾಷಾ ಮಾಲೀಕತ್ವದ ಸಂಸ್ಥೆಯಿಂದ ಟೆಂಡರ್ ಪಡೆದು ನಿರ್ಮಾಣ ಮಾಡುತ್ತಿರುವ

2ನೇ ಪುಟಕ್ಕೆ

## ಕೋವಿಡ್ ಉಪತಳಿ ಅಷ್ಟೇನೂ ಅಪಾಯಕಾರಿಯಲ್ಲ, ಆತಂಕಗೊಳ್ಳುವ ಅಗತ್ಯವಿಲ್ಲ : ಗುಂಡೂರಾವ್

**ಬೆಂಗಳೂರು,ಮೇ.26–** ಕೋವಿಡ್ ಸೋಂಕಿನ ಉಪತಳಿ ಅಷ್ಟೇನೂ ಅಪಾಯಕಾರಿಯಲ್ಲ. ಹೀಗಾಗಿ ಜನ ಆತಂಕಗೊಳ್ಳುವ ಅಗತ್ಯವಿಲ್ಲ, ಮುಂದಿನ ಮೂರಾಲ್ಕು ದಿನಗಳ ಪರಿಸ್ಥಿತಿ ಅವಲೋಕಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋವಿಡ್ ಜೆ–1 ಉಪತಳಿಯಿಂದ ಹೆಚ್ಚಿನ ದುಷ್ಪರಿಣಾಮ ಬೀರಿದ ವರದಿಗಳು ಎಲ್ಲೂ ವರದಿಯಾಗಿಲ್ಲ. ಯಾರೂ ಗಂಭೀರ ಪರಿಸ್ಥಿತಿಗೆ ಹೋಗಿರುವ ಉದಾಹರಣೆಗಳಿಲ್ಲ, ಸಿಂಗಾಪುರ ಹಾಗೂ ಇತರ ದೇಶಗಳಲ್ಲಿ ಕೋವಿಡ್ ಹಬ್ಬಿದೆ. ಅದರಿಂದ ಆತಂಕದ ವಾತಾವರಣವಿಲ್ಲ, ಪ್ರವಾಸ ಮಾಡಬಾರದು ಎಂದು ಯಾರೂ ನಿರ್ಬಂಧ ಹೇರಿಲ್ಲ. ಮೊದಲ ಮತ್ತು ಎರಡನೇ ಹಂತದ ಕೋವಿಡ್ ಪರಿಸ್ಥಿತಿ ಈಗಿಲ್ಲ. ಆದರೂ ನಮ್ಮ ಎಚ್ಚರಿಕೆಯಲ್ಲಿ ನಾವಿರುತ್ತೇವೆ ಎಂದರು.ಕೇಂದ್ರ ಸರ್ಕಾರ ರಾಜ್ಯದ ಆರೋಗ್ಯ ಇಲಾಖಾಧಿಕಾರಿಗಳ ಜೊತೆ ನಿರಂತರ ಸಂಪರ್ಕದಲ್ಲಿದೆ. ಕೆಲ





ಮಾಹಿತಿಗಳನ್ನು ಹಂಚಿಕೊಂಡಿದ್ದಾರೆ. ಸದ್ಯಕ್ಕೆ ನೀಡಿರುವ ಮಾರ್ಗಸೂಚಿಗಳೇ ಸಾಕು. ವಿಶೇಷ ಕ್ರಮಗಳ ಅಗತ್ಯ ಇಲ್ಲ. ಜನ ವಿಶೇಷ ನಿಗಾ ವಹಿಸುವ ರಿಸ್ಕ್ ಕೆಟಗರಿಯವರು ಮಾಸ್ಕ್ ಧರಿಸಿ ಮುನ್ನೆಚ್ಚರಿಕೆ ವಹಿಸಲು ಸಲಹೆ ನೀಡಲಾಗಿದೆ.

2ನೇ ಪುಟಕ್ಕೆ

## ಜೂನ್ ತಿಂಗಳಲ್ಲಿ ಒಳಮೀಸಲಾತಿ ಘೋಷಣೆಯಾಗುವ ವಿಶ್ವಾಸ



**ಬಳ್ಳಾರಿ, ಮೇ.26–** ಒಳ ಮೀಸಲಾತಿ ಘೋಷಣೆ ಮಾಡುವ ಹಿನ್ನೆಲೆ ರಾಜ್ಯಾದ್ಯಂತ ಜಾತಿ ಗಣತಿ ನಡೆದಿದೆ. ಮೇ ಅಂತ್ಯಕ್ಕೆ ಜಾತಿ ಗಣತಿ ಮುಗಿಯುವ ವಿಶ್ವಾಸವಿದೆ. ಜೂನ್ ತಿಂಗಳಲ್ಲಿ ಒಳಮೀಸಲಾತಿ ಘೋಷಣೆಯಾಗುವ ವಿಶ್ವಾಸವಿದೆ ಎಂದು ಮಾಜಿ ಸಚಿವ, ಒಳ ಮೀಸಲಾತಿ ಹೋರಾಟಗಾರ ಹೆಚ್. ಆಂಜನೇಯ ಹೇಳಿದ್ದಾರೆ.

ನಗರದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕೆಲವರು ಬೇಡ ಜಂಗಮರು ಜಾತಿ ಗಣತಿ ಲಾಭ ಪಡೆಯಲು ಯತ್ನ ಮಾಡ್ತಿದ್ದಾರೆ. ನಕಲಿ ಸರ್ಟಿಫಿಕೇಟ್ ತೆಗೆದು ಕೊಂಡ್ರೇ ಕೊಟ್ಟವನು ಮತ್ತು ತೆಗೆದುಕೊಂಡವರ ಇಬ್ಬರನ್ನೂ ಜೈಲಿಗೆ ಕಳುಹಿಸುತ್ತೇವೆ. ಮಾದಿಗರ ಹಕ್ಕು ಕಸಿದುಕೊಳ್ಳಲು ಯತ್ನಿಸಿದರೇ ಸುಮ್ಮನೆ ಇರಲು ಸಾದ್ಯವಿಲ್ಲ ಈ ಬಗ್ಗೆ ಈಗಾಗಲೇ ಆಯೋಗ ಮದ ಗಮನಕ್ಕೆ ತರಲಾಗಿದೆ. ಕಳೆದ

ಮೂವತ್ತೈದು ವರ್ಷದಲ್ಲಿ ಮೀಸಲಾತಿ ಪಡೆಯುವುದಕ್ಕಾಗಿ ಹೋರಾಟ ನಡೆಯುತ್ತಿದೆ.

ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಸಿಕ್ಕಿಲ್ಲ. ಇದೀಗ ಜಾತಿ ಗಣತಿ ನಡೆದಿದ್ದ, ಒಳ ಮೀಸಲಾತಿಗೆ ಎಲ್ಲಾ ಸರ್ಕಾರ ಸಪೋರ್ಟ್ ಮಾಡಿದೆ ಎಂದರು.

ಮೀಸಲಾತಿ ಕ್ಷೇತ್ರದಲ್ಲಿ ಕೆಲವರು ಸ್ಪರ್ಧೆ ಮಾಡ್ತಾರೆ.

ಆದ್ರೇ ಇದರ ಬಗ್ಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರ ಬದ್ಧತೆ ಪ್ರದರ್ಶಿಸಬೇಕು. ಕೆಲವರು ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿಸುಳ್ಳು ಹೇಳ್ತಾರೆ ಬೇಡ ಜಂಗಮರು ಮೀಸಲಾತಿಗೆ ಅರ್ಹರು ಎಂದು ಸಮರ್ಥನೆ ಕೊಳ್ಳುತ್ತಿದ್ದಾರೆ. ಇದ್ಯಾವುದಕ್ಕೂ ಅವಕಾಶವಿಲ್ಲ ಎಂದರು ರಾಹುಲ್ ಗಾಂಧಿ ಜಾತಿಗಣತಿಯಾಗಬೇಕೆಂದು ಒತ್ತಾಯ ಮಾಡಿದ್ದಾರೆ. ಅದರ ಫಲವಾಗಿ ಜನಗಣತಿ ಜೊತೆಗೆ ಜಾತಿಗಣತಿ ಮಾಡಲು ಪ್ರಧಾನಿ ಒಪ್ಪಿಕೊಂಡಿದ್ದಾರೆ. ರಾಹುಲ್ ಗಾಂಧಿ ರಾಷ್ಟ್ರೀಯ ಕಾಂಗ್ರೆಸ್ ನ ಪ್ರಶ್ನಾತೀತ ನಾಯಕ ಮುಂದೆ ಪ್ರಧಾನಿಯಾಗಲಿದ್ದಾರೆ ಎಂದು ಭವಿಷ್ಯ ನುಡುದರು. ತೆಲಂಗಾಣ , ಹರಿಯಾಣ, ಸೇರಿದಂತೆ ಕೆಲ ರಾಜ್ಯದಲ್ಲಿ ಒಳ ಮೀಸಲಾತಿ ಜಾರಿಯಾಗಿದೆ.

2ನೇ ಪುಟಕ್ಕೆ

## ಅಟಲ್ ವಿರಾಸತ್ ಕವನ ಸಂಕಲನ ಬಿಡುಗಡೆ



**ಬೀದರ:ಮೇ.26–** ಬೀದರಗೆ ಆಗಮಿಸಿದ ರಾಜ್ಯ ಬಿ.ಜೆ.ಪಿ ಅಧ್ಯಕ್ಷರಾದ ಬಿ. ವೈ ವಿಜಯೇಂದ್ರ ಅವರನ್ನು ಇಂದು ವಿಮಾನ ನಿಲ್ದಾಣದಲ್ಲಿ ಜಿಲ್ಲಾ ಬಿ.ಜೆ.ಪಿ ಅಧ್ಯಕ್ಷರ ನೇತೃತ್ವದಲ್ಲಿ ಸ್ವಾಗತ ಕೊಳ್ಳಲಾಯಿತು.

ರಾಜ್ಯ ಬಿ.ಜೆ.ಪಿ ಕಾರ್ಯದರ್ಶಿ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಯವರ ನಿವಾಸದಲ್ಲಿ ಜಿಲ್ಲಾ ಬಿ.ಜೆ.ಪಿ ಅಧ್ಯಕ್ಷ ಸೋಮಣ ಪಾಟೀಲರು ಮತ್ತು ಅಟಲ್ ಬಿಹಾರಿ ವಾಜಪೇಯಿ ಶತಮಾನೋತ್ಸವ ಸಮಿತಿಯ ಜಿಲ್ಲಾ ಸಂಚಾಲಕರಾದ ಮಾಜಿ ಬುಡಾ ಅಧ್ಯಕ್ಷರಾದ ಬಾಬು ವಾಲಿಯವರು ಅಟಲ್ ವಿರಾಸತ್ ಬಹುಭಾಷಾ ಕವಿಗೋಷ್ಠಿ ಯಶಸ್ವಿಯಾಗಿ ನಡೆದ ವರದಿ ನೀಡಿ ನೂರು ಜನ ಕವಿಗಳ ಕವನ ಸಂಕಲನವನ್ನು ಹೊರತರಲಾಗಿದೆ. ತಮ್ಮ ಶುಭಾಶಯ ಸಂದೇಶದೊಂದಿಗೆ ಈ ಕೃತಿಯು ರಾಜ್ಯ ಬಿ.ಜೆ.ಪಿ ಕಾರ್ಯ

2ನೇ ಪುಟಕ್ಕೆ

## ಡ್ಯಾಂಗೆ ಒಳ ಹರಿವು ಆರಂಭವಾದರೂ ಮುರಿದ ಗೇಟಿನ ದುರಸ್ಥಿ ಆಗಲಿಲ್ಲ



**ಬಳ್ಳಾರಿ, ಮೇ.26–** ನಿರೀಕ್ಷೆಗಿಂತ ಮುಂಚೆ ಮುಂಗಾರು ಮಳೆಯ ಆರಂಭಗೊಂಡು ತುಂಗಭದ್ರಾ ಜಲಾಶಯಕ್ಕೆ ಒಳಹರಿವು ಆರಂಭವಾಗಿದೆ. ಕಳೆದ ನಾಲ್ಕು ದಿನದಲ್ಲಿ 4 ಟಿಎಂಸಿ ನೀರು ಹರಿದು ಬಂದಿದೆ ಇಂದು ಒಟ್ಟಾರೆ 10 ಟಿಎಂಸಿ ನೀರು ಸಂಗ್ರಹವಾಗಿದೆ. ಹೀಗಾಗಿ ಕಳೆದ ವರ್ಷ ನೀರಿನ ಒತ್ತಡಕ್ಕೆ ಮುರಿದು ಹೋಗಿದ್ದ ಜಲಾಶಯದ 19 ನೇ ಗೇಟ್ ಬದಲಿಸುವ ಕಾಮಗಾರಿ ಇನ್ನೂ ಆರಂಭವಾಗಿಲ್ಲ. ಮಂಡಳಿಯ ಪ್ರಕ್ರಿಯೆಗಳನ್ನು ಗಮನಿದಿದರೆ ಈ ವರ್ಷವೂ ಈ ಕಾಮಗಾರಿ ಆಗುವ ಸಾಧ್ಯತೆ ಕಂಡು ಬರುತ್ತಿಲ್ಲ.

ಕಳೆದ 75 ವರ್ಷಗಳ ಹಿಂದೆ ನಿರ್ಮಿಸಿದ ಈ ಜಲಾಶಯಕ್ಕೆ ನೀರನ್ನು ಸಂಗ್ರಹಿಸಲು ಆಣೆಕಟ್ಟೆಗೆ 33 ಗೇಟ್ ಗಳನ್ನು ಅಳವಡಿಸಿದೆ.ಕಳೆದ ವರ್ಷ ಡ್ಯಾಂನ19 ನೇ ಗೇಟ್ ನೀರಿನ ರಭಸಕ್ಕೆ ಮುರಿದು ಹೋಗಿತ್ತು. ಇದು ಘಟಿಸಿ 9 ತಿಂಗಳು ಕಳೆದಿದೆ. ಗೇಟ್ ಮುರಿದಾಗ ತಕ್ಷಣ ವ್ಯರ್ಥವಾಗಿ ನದಿಗೆ ಹರಿದು ಹೋಗುತ್ತಿದ್ದ ನೀರನ್ನು ಉಳಿಸಿಕೊಳ್ಳಲು ಸ್ಟಾಪ್‌ಲಾಗ್ ಅಳವಡಿಕೆ ಮಾಡಲಾಯ್ತು.ಈ ಗೇಟ್ ನ್ನು ಹೊಸದಾಗಿ ಮಾಡಲು ಟೆಂಡರ್ ನ್ನು ಕಳೆದ ಏ.17 ರಂದೇ ಗುಜರಾತ್ ಮೂಲದ ಕಂಪನಿಗೆ ನೀಡಲಾಗಿದೆ. ಆದರೂ ಈ ವರೆಗೂ ಕಾಮಗಾರಿ

2ನೇ ಪುಟಕ್ಕೆ

ಮೊದಲನೇಯ ಪುಟದಿಂದ

# ವಿಶ್ವದಲ್ಲೇ ನಾಲ್ಕನೇ ಅತೀ ದೊಡ್ಡ ಆರ್ಥಿಕ ರಾಷ್ಟ್ರವಾದ ಭಾರತ

ಜಾರಿಗೆ ತರುವ ನಿರೀಕ್ಷೆಯಿದೆ. ಭಾರತವು ಜಾಗತಿಕ ಪೂರೈಕೆ ಸರಪಳಿಗಳಲ್ಲಿ ತನ್ನ ಪಾತ್ರವನ್ನು ಇನ್ನಷ್ಟು ಬಲಪಡಿಸಲು ಮತ್ತು ಮೇಕ್ ಇನ್ ಇಂಡಿಯಾ ಅಭಿಯಾನದ ಅಡಿಯಲ್ಲಿ ಹೊಸ ಹೂಡಿಕೆಗಳನ್ನು ಆಕರ್ಷಿಸಲು ಪ್ರಯತ್ನಿಸುತ್ತಿರುವಂತೆಯೇ, ರಾಜಕೀಯವಾಗಿ ಮಹತ್ವದ ಸಮಯದಲ್ಲಿ ಈ ಆರ್ಥಿಕ ಮೈಲಿಗಲ್ಲು ಬರುತ್ತದೆ. ಇದನ್ನು ಸಾಧ್ಯವಾಗಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಧನ್ಯವಾದ ಎಂದು ಬರೆದುಕೊಂಡಿದ್ದಾರೆ.

ಅಮೆರಿಕ, ಚೀನಾ ಮತ್ತು ಜರ್ಮನಿ ಬಳಿಕ ಭಾರತ ದೊಡ್ಡ ಆರ್ಥಿಕ ಶಕ್ತಿಯಾಗಿದೆ. ದೇಶೀಯ ಸುಧಾರಣೆಗಳು ಮತ್ತು ಭಾರತದ ಪರವಾಗಿ ಹೆಚ್ಚು ಹೆಚ್ಚು ಒಲವಿನಿಂದ ಆರ್ಥಿಕತೆ ಬಲಿಷ್ಠವಾಗಿದೆ. ನಾವು ನಮ್ಮ ಹಾದಿಯಲ್ಲಿಯೇ ಮುಂದುವರೆದರೆ, ಕೇವಲ 2.5 ರಿಂದ 3 ವರ್ಷಗಳಲ್ಲಿ ನಾವು ಮೂರನೇ ಅತಿದೊಡ್ಡ ರಾಷ್ಟ್ರವಾಗಬಹುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಅಕ್ರಮ ಕಲ್ಲು ಗಣಿಗಾರಿಕೆ ವಿರುದ್ಧ ಮೇ 27ಕ್ಕೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ: ಜಾವೇದ್ ಖಾನ್

ಸರ್ಕಾರಿ ಕಟ್ಟಡ, ರಸ್ತೆ ಸೇರಿದಂತೆ ಅನೇಕ ಕಾಮಗಾರಿಗಳು ಅತ್ಯಂತ ಕಳಪೆ ಮಟ್ಟದ್ದಾಗಿವೆ. ಆದರೂ, ಅವರ ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸದೆ ಕಾಮಗಾರಿ ನಿರ್ಮಾಣಕ್ಕೆ ಅವಕಾಶ ನೀಡುತ್ತಿರುವುದು ಅನೇಕ ಅನುಮಾನಗಳನ್ನು ಹುಟ್ಟುಹಾಕಿದೆ ಎಂದರು. ಕೂಡಲೇ ಅಕ್ರಮವಾಗಿ ರಾಜಸ್ವ ನೀಡದೆ ಸ್ಟೋನ್ ಕ್ರಷರ್‌ನಲ್ಲಿ ಉತ್ಪಾದಿಸಿರುವ ಕೋಟ್ಯಾಂತರ ಮೌಲ್ಯದ ಜಲ್ಲಿ ಕಲ್ಲು, ಎಂ. ಸ್ಯಾಂಡ್ ಅನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ಮುಟ್ಟುಗೋಲು ಹಾಕಿಕೊಂಡು ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಖಾನ್ ಆಗ್ರಹಿಸಿದರು. ನಮ್ಮ ನಿರಂತರ ಹೋರಾಟದಿಂದ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿ ಪುಷ್ಪಲತಾ ಅವರನ್ನು ಅಮಾನತು ಮಾಡಿರುವುದನ್ನು ಬಿಟ್ಟರೆ, ಬೇರೆಯವರ ಮೇಲೆ ಯಾವುದೇ ಕ್ರಮ ಕೈಗೊಳ್ಳದೆ ಇರುವುದರಿಂದ ಬೆಂಗಳೂರಿನಲ್ಲಿ ಹೋರಾಟ ಹಮ್ಮಿಕೊಳ್ಳಲಾಗಿದೆ. ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳಿಗೆ ಹಾಗೂ ಸಚಿವರಿಗೆ ಮನವಿ ಸಲ್ಲಿಸಿ ಕ್ರಮ ಕೈಗೊಳ್ಳುವವರೆಗೂ ಹೋರಾಟ ನಡೆಸಲಾಗುವುದು ಎಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಜನಸೇವಾ ಫೌಂಡೇಶನ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್ ಛಲವಾದಿ ಬೆಟ್ಟದೂರು, ತಾಜುದ್ದೀನ್, ಹಸನ್, ಗೋಕುಲ್ ಸಾಬ್ ಚೀಕಲಪರ್ವಿ, ಅಯ್ಯಪ್ಪ ಮುಚುಗೇರಿ, ರಾಜಾಸಾಬ್ ನೀರಮಾನ್ವಿ, ಚಂದ್ರಶೇಖರ ಮೌಳಿ, ಮೊಹಮ್ಮದ್ ಚೀಕಲಪರ್ವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೋವಿಡ್ ಉಪತಳಿ ಅಷ್ಟೇನೂ ಅಪಾಯಕಾರಿಯಲ್ಲ, ಆತಂಕಗೊಳ್ಳುವ ಅಗತ್ಯವಿಲ್ಲ : ಗುಂಡೂರಾವ್

ಸೋಂಕಿನಿಂದ ನಿನ್ನೆ ಒಬ್ಬರು ಮೃತಪಟ್ಟಿರುವುದು ಖಚಿತವಾಗಿದೆ. ಅವರಿಗೆ 84 ವರ್ಷವಾಗಿತ್ತು. ಒಂದು ವರ್ಷದಿಂದ ಅವರು ಅನಾರೋಗ್ಯದಿಂದ ಹಾಸಿಗೆ ಹಿಡಿದಿದ್ದರು. ಹಿಪ್ ರಿಪ್ಲೇಸ್‌ಮೆಂಟ್, ಹೃದ್ರೋಗ, ಕ್ಷಯ ರೋಗವೂ ಇತ್ತು. ನಾನಾ ಆರೋಗ್ಯ ಸಮಸ್ಯೆಗಳಿದ್ದವು. ಕೋವಿಡ್ ಸೋಂಕಿನಿಂದಲೇ ಮೃತಪಟ್ಟಿದ್ದಾರೆ ಎಂಬ ಬಗ್ಗೆ ಆಡಿಟ್ ನಡೆಸಲು ಸೂಚಿಸಲಾಗಿದೆ ಎಂದು ತಿಳಿಸಿದರು.ಕೋವಿಡ್ ಸೋಂಕನ್ನು ಸರ್ಕಾರ ನಿರ್ಲಕ್ಷ್ಯ ಮಾಡಿಲ್ಲ, ಈಗಾಗಲೇ ತಾಂತ್ರಿಕ ಸಲಹಾ ಸಮಿತಿ ಸಭೆ ನಡೆಸಲಾಗಿದೆ. ಏಕಾಏಕಿ ಲಾಕ್ ಡೌನ್ ಮಾಡಲು ಸಾಧ್ಯವಿಲ್ಲ. ಎಲ್ಲಾ ಬೆಳವಣಿಗೆಗಳ ಮೇಲೆ ನಿಗಾ ವಹಿಸಲಾಗಿದೆ. ಅಧಿಕಾರಿಗಳು ಕೇಂದ್ರ ಸರ್ಕಾರದ ಜೊತೆ ಪದೇಪದೇ ಸಮಾಲೋಚನೆ ನಡೆಸುತ್ತಿದ್ದಾರೆ. ಅತ್ಯಂತ ಜವಾಬ್ದಾರಿಯುತವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಸಮರ್ಥಿಸಿಕೊಂಡರು.

ಕೋವಿಡ್‌ನ ವ್ಯಾಪಕ ಪರೀಕ್ಷೆಯಿಂದ ವಾತಾವರಣ ತಿಳಿದುಬರಲಿದೆ. ಸೋಂಕಿತರು ಚೇತರಿಸಿಕೊಳ್ಳುತ್ತಿದ್ದಾರೆ. ಕೇರಳದಲ್ಲಿ ಸೋಂಕು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಗಡಿಭಾಗದಲ್ಲಿ ನಿರ್ಬಂಧ ವಿಧಿಸುವ ಪರಿಸ್ಥಿತಿಯೂ ಇಲ್ಲ. ಇಂಥಹ ವಿಚಾರದಲ್ಲಿ ಕೇಂದ್ರ ಸರ್ಕಾರವೇ ನಿರ್ಧಾರ ತೆಗೆದುಕೊಳ್ಳಬೇಕು, ಸದ್ಯಕ್ಕೆ ಯಾವುದೇ ನಿರ್ಬಂಧಗಳಿಲ್ಲ. ಅಂತರಾಜ್ಯ ಪ್ರವಾಸ ಸೇರಿದಂತೆ ಎಲ್ಲಾ ಚಟುವಟಿಕೆಗಳು ಮುಕ್ತವಾಗಿರಲಿವೆ. ಖಾಸಗಿ ಆಸ್ಪತ್ರೆಗಳು ಸೋಂಕಿನ ಪರೀಕ್ಷೆ ಬಗ್ಗೆ ಸರ್ಕಾರಕ್ಕೆ ಮಾಹಿತಿ ನೀಡಲೇಬೇಕು. ಪರೀಕ್ಷಾ ವೆಚ್ಚ ನಿರ್ಧರಣೆ ಬಗ್ಗೆ ಇನ್ನೂ ತೀರ್ಮಾನ ತೆಗೆದುಕೊಂಡಿಲ್ಲ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ತಮ್ಮೊಂದಿಗೆ ಈ ವಿಚಾರವಾಗಿ ಚರ್ಚೆ ನಡೆಸಿದ್ದಾರೆ.

# ಜೂನ್ ತಿಂಗಳಲ್ಲಿ ಒಳಮೀಸಲಾತಿ ಘೋಷಣೆಯಾಗುವ ವಿಶ್ವಾಸ

ಒಳಮೀಸಲಾತಿ ಜಾರಿಯಾಗೋವರೆಗೂ ಯಾವ ಹುದ್ದೆ ತುಂಬಬಾರದು ಎಂದು ಒತ್ತಾಯಿಸಿದ್ದೇವೆ. ಒಳಮೀಸಲಾತಿ ನೀಡೋದಾಕ್ಕಾಗಿಯೇ ಜಾತಿಗಣತಿ ನಡೆಯುತ್ತಿದೆ. ಸಮಗ್ರ ದಾಖಲೆ ನೀಡುವಂತೆ ಸಮಾಜಕ್ಕೆ ಆಂಜನೇಯ ಕರೆ ನೀಡಿದ್ದಾರೆ. ಕೆಲವು ಕಡೆ ಎಸ್ಸಿಗಳು ಕ್ರಿಶ್ಚನ್ ಮತ್ತು ಬೌದ್ಧ ಧರ್ಮ ಪಾಲಿಸ್ತಾರೆ ಆದ್ರೇ ಮೂಲ ಜಾತಿ ಸರಿಯಾಗಿ ಬರೆಸಬೇಕು. ಇನ್ನೂ ಬೇಡ ಜಂಗಮರು ಅಂದ್ರೇ ಆಂಧ್ರದಿಂದ ವಲಸೆ ಬಂದವರು. ಬೇಡ ಜಂಗಮ ಬುಡ್ಗ ಜಂಗಮ ಎಂದು ಕೆಲವು ಕಡೆ ಇದ್ದಾರೆ. ಬೇಡ ಎಂದರೆ ಕಾಡಿನಲ್ಲಿ ಭೇಟೆಯಾಡುವವರು. ಊರು ಊರು ಅಲೆಯುವವರು.. ಅವರ ಹೆಸರು ದುರ್ಬಳಕೆ ಮಾಡಿಕೊಂಡು ವೀರಶೈವ, ಜಂಗಮರು ಬೇಡ ಎನ್ನುವ ಶಬ್ದ ಕದ್ದುಕೊಂಡು ಮಾದಿಗರ ಅನ್ನಕ್ಕೆ ಕನ್ನ ಹಾಕ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಮುಖಂಡರಾಸ ಲಿಡ್ಕರ್ ಅಧ್ಯಕ್ಷ. ಮುಂಡ್ರಿಗಿ ನಾಗರಾಜ್ , ಜಿಪಂ ಮಾಜಿ ಸದಸ್ಯ ಎ.ಮಾನಯ್ಯ, ವೆಂಕಟೇಶ ಹೆಗಡೆ ಮೊದಲಾದವರು ಇದ್ದರು

# ಅಟಲ್ ವಿರಾಸತ್ ಕವನ ಸಂಕಲನ ಬಿಡುಗಡೆ

ಕರಣಿಯಲ್ಲಿ ಬಿಡುಗಡೆ ಮಾಡಿ ಸುವಂತೆ ಕೋರಿದಾಗ ಸುಮ್ಮತಿಸಿದ ರಾಜ್ಯ ಅಧ್ಯಕ್ಷರನ್ನು ಜಿಲ್ಲೆ ಅಭಿನಂದಿಸುತ್ತದೆ. ಈ ಸಂದರ್ಭದಲ್ಲಿ ರಾಜ್ಯ ಅಧ್ಯಕ್ಷರಿಗೆ ಅಟಲ್ ಬಿಹಾರಿ ವಾಜಪೇಯಿ ಶತಮಾನೋತ್ಸವದ ನೆನಪಿನ ಕಾಣಿಕೆ ನೀಡಿ ಅಭಿನಂದಿಸಲಾಯಿತು ರಾಜ್ಯ ಬಿ.ಜೆ.ಪಿ ಕಾರ್ಯದರ್ಶಿ ಹಾಗೂ ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ್ ಅಟಲ್ ವಿರಾಸತ್ ಜಿಲ್ಲಾ ಸಂಚಾಲಕ ಬಾಬು ವಾಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿರಪ್ಪಾ ಯರನಳ್ಳಿ ಸೇರಿದಂತೆ ಪಕ್ಷದ ಪ್ರಾಮುಖ್ಯರು ಉಪಸ್ಥಿತರಿದ್ದರು.

# ಡ್ಯಾಂಗೆ ಒಳ ಹರಿವು ಆರಂಭವಾದರೂ ಮುರಿದ ಗೇಟಿನ ದುರಸ್ಥಿ ಆಗಲಿಲ್ಲ

ಆರಂಭವಾಗಿಲ್ಲ. ಆದರೆ ಇತ್ತ ಜಲಾಶಯಕ್ಕೆ ಒಳ ಹರಿವು ಹೆಚ್ಚಿರುವುದರಿಂದ ಈ ವರ್ಷವೂ ಹೊಸ ಗೇಟ್ ಅಳವಡಿಕೆ ಸಾಧ್ಯತೆ ಇಲ್ಲ ಎನ್ನಲಾಗುತ್ತಿದೆ.ಈ ವರ್ಷವೂ ಈ ಸ್ಟಾಪ್‌ಲಾಗ್ ನಂಬಿ ಜಲಾಶಯದಲ್ಲಿ ನೀರು ಸಂಗ್ರಹಿಸಬಹುದೇ ಎಂಬ ಪ್ರಶ್ನೆಗೆ ನೀರಾವರಿ ತಜ್ಞರು ಅನುಮಾನ ವ್ಯಕ್ತಪಡಿಸುತ್ತಿದ್ದಾರಂತೆ.

ಜಲಾಶಯದ ಉಳಿದ 32 ಕ್ರಸ್ಟ್‌ಗೇಟ್‌ಗಳನ್ನು ಹೊಸದಾಗಿ ಅಳವಡಿಸಲು ನಿರ್ಮಾಣಕ್ಕಾಗಿ ತುಂಗಭದ್ರಾ ಮಂಡಳಿ ಇ-ಟೆಂಡರ್ ಕರೆದು ತಿಂಗಳು ಕಳೆದಿದೆ. ಆದರೆ ಬಿಡ್‌ನಲ್ಲಿ ಯಾವುದೇ ಕಂಪನಿ ಈ ವರೆಗೆ ಪಾಲ್ಗೊಳ್ಳದ ಕಾರಣ ಮತ್ತೊಮ್ಮೆ ಟೆಂಡರ್ ಆಹ್ವಾನಿಸಲಾಗಿದೆಯಂತೆವೆಲ್ಡಿಂಗ್ ಮಾಡಲಾಗಿದೆ.ಜಲಾಶಯದ ಗೇಟ್‌ಗಳು ಶಕ್ತಿ ಸಾಮರ್ಥ ಶೇ.35ರಿಂದ 45ರಷ್ಟು ಕುಸಿದೆವೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ. ಪ್ರಸಕ್ತ ವರ್ಷವೇ ಒಂದಿಷ್ಟು ಗೇಟ್‌ಗಳನ್ನು ಬದಲಿಸಬೇಕೆಂದೂ ಸಲಹೆಯನ್ನು ಸಹ ಅವರು ನೀಡಿದ್ದರಂತೆ. ಆದರೆ ಮಂಡಳಿಯವರು ಏನಾದರೂ ಆಗಲಿ ಎಂದು ಎಲ್ಲಾ ಗೇಟ್ ಗಳನ್ನು ಪರಿಶೀಲನೆ ಮಾಡಿ ವೀಕ್ ಇರುವ ಕಡೆ ವೆಲ್ಡಿಂಗ್ ಮಾಡಿದ್ದಾರಂತೆ.

**ರೈತರಿಗೆ ಆತಂಕ :** ಮಂಡಳಿಯ ಅಧಿಕಾರಿಗಳು ಗೇಟ್ ಗಳನ್ನು ಹೊಸದಾಗಿ ಅಳವಡಿಸಲು ಸಾಧ್ಯವಾಗದೇ ಇರುವ ಕಾರಣ ಈ ವರ್ಷ ಜಲಾಶಯದಲ್ಲಿ ಶೇ 60 ರಿಂದ 80 ರಷ್ಟು ಮಾತ್ರ ನೀರನ್ನು ಸಂಗ್ರಹಿಸಬಹುದು ಎನ್ನುತ್ತಿದ್ದಾರಂತೆ. ಹೀಗಾದರೆ ಅಚ್ಚುಕಟ್ಟು ಪ್ರದೇಶದ ರೈತರು ಎರಡನೇ ಬೆಳೆಯಲು ಕಷ್ಟವಾಗುತ್ತಿದೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9972778310

# ರೈತರ ಹಿತ ಕಾಯಲು ಅಗತ್ಯ ಕ್ರಮ : ನೇಮಿರಾಜ್ ನಾಯ್ಕ್



ಹಗರಿಬೊಮ್ಮನಹಳ್ಳಿ. ಮೇ.25 ರೈತ ಮತ್ತು ಸೈನಿಕ ದೇಶದ ಎರಡು ಕಣ್ಣುಗಳು ಇದ್ದಂತೆ ಇವರನ್ನು ಕಾಪಾಡಿಕೊಂಡು ಹೋಗುವ ಕರ್ತವ್ಯ ನಮ್ಮದಾಗಿದೆ ಎಂದು ಶಾಸಕ ಕೆ ನೇಮಿರಾಜ್ ನಾಯ್ಕ್ ಹೇಳಿದರು.

ಪಟ್ಟಣದ ಶಾಸಕರ ಜನ ಸಂಪರ್ಕ ಕಚೇರಿ ಅವರಣ ದಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಗಂಗಾ ಕಲ್ಯಾಣ ಯೋಜನೆಯಡಿ 50 ಫಲಾನುಭವಿಗಳಿಗೆ ಶನಿವಾರ ಪಂಪ್ ಸೆಟ್ ಸಾಮಗ್ರಿಗಳನ್ನು ವಿತರಣೆ ಮಾಡಿ ನಂತರ ಮಾತನಾಡಿದರು. ಮುಂದಿನ ದಿನಗಳಲ್ಲಿ ಅಂಬೇಡ್ಕರ್ ನಿಗಮ, ಬಂಜಾರ್ ಭೋವಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆ ಅಡಿ 80ಕ್ಕೂ ಹೆಚ್ಚು ಫಲಾನುಭವಿಗಳಿಗೆ ಸಾಮಗ್ರಿಗಳನ್ನು ನೀಡುವುದಾಗಿ ತಿಳಿಸಿದರು.

ಈ ವರ್ಷ ಆರಂಭದ ಮುಂಗಾರು ಮಳೆ ಚೆನ್ನಾಗಿ ಆಗಿದೆ. ರೈತರ ಬಿತ್ತನೆ ಬೀಜ ಮತ್ತು ರಸಗೊಬ್ಬರ ಕೊರತೆಯಾಗದಂತೆ ದಾಸ್ತಾನು ಮಾಡಲಾಗಿದೆ. ಯಾರಾದರೂ ಬ್ಲಾಕ್ ನಲ್ಲಿ ಮಾರಿದರೆ ಅಂಥವರ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಮಾಲವಿ ಜಲಾಶಯದ ಕ್ರಸ್ಟ್ ಗೇಟ್ ಗಳನ್ನು ದುರಸ್ತಿ ಕಾರ್ಯ ನಡೆದಿದೆ. ಇದಲ್ಲದೆ ಜಂಗಲ್ ಕಟಿಂಗ್ ಇಂಟೆಕ್ ಕಾಲುವೆ ಗೇಟ್ ಗಳ ದುರಸ್ತಿ ಕಾರ್ಯಕ್ಕೆ ಇಲಾಖೆಯಿಂದ 2 ಕೋಟಿ ರೂ. ಮುಂಜೂರು ಆಗಿದೆ. ಮುಂದಿನ ತಿಂಗಳು ಶಾಲೆಗಳು ಆರಂಭವಾಗುತ್ತಿದ್ದು. ಶಾಲೆಗಳಿಗೆ ಕಾಂಪೌಂಡು ಸುಣ್ಣ ಬಣ್ಣ ಸೇರಿದಂತೆ ಸ್ವಚ್ಛತೆಗೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಕನ್ನಳ್ಳಿ ಚಂದ್ರಶೇಖರ್ ಕಿನ್ನಾಳ ಸುಭಾಷ್, ಚಿತ್ತವಾಡಗಿ ಪ್ರಕಾಶ್, ಜೆಡಿಎಸ್ ಅಧ್ಯಕ್ಷ ವೈಮಲ್ಲಿಕಾರ್ಜುನ, ಕೃಷ್ಣಮೂರ್ತಿ ಶೆಟ್ರು, ಹೋಟೆಲ್ ಸಿದ್ದರಾಜು, ಉದಯ್ ಮಹಾಂತೇಶ್ ನಾಯಕ್, ಶ್ರೀಶೈಲ ಪವಾಡಿ ಮಂಜುನಾಥ್, ಮೈನಹಳ್ಳಿ ಕೊಟ್ರೇಶಪ್ಪ, ನಿಗಮದ ಅಧಿಕಾರಿ ಶೆಟ್ಟಿ ನಾಯ್ಕ್ ಇತರರಿದ್ದರು.

# ಕರಜಗಿ ಗ್ರಾಪಂ ಹೆಸರಿಗೆ ಮಾತ್ರ, ಅಭಿವೃದ್ಧಿ ಶೂನ್ಯ !



**ಕರಜಗಿ,ಮೇ.26**–ಅಫಜಲಪುರ ಪಟ್ಟಣ ಹೊರತುಪಡಿಸಿದರೆ ತಾಲೂಕಿನಲ್ಲಿ ಕರಜಗಿ ಗ್ರಾಮವೇ ಅತಿ ದೊಡ್ಡ ಗ್ರಾಮವಾಗಿದ್ದು, ಪಟ್ಟಣ ಪಂಚಾಯಿತಿಯಾಗುವ ಎಲ್ಲಾ ಅರ್ಹತೆಗಳನ್ನು ಹೊಂದಿರುವ ಈ ಗ್ರಾಮದಲ್ಲಿ ಕನಿಷ್ಠ ಮೂಲ ಸೌಲಭ್ಯಗಳು ಇಲ್ಲದಾಗಿದೆ.

ಚುನಾವಣೆ ಬಂದಾಗ ಗ್ರಾಮವನ್ನು ಅಭಿವೃದ್ಧಿಪಡಿಸುವ ಭರವಸೆ ನೀಡುವ ಗ್ರಾಪಂ ಸದಸ್ಯರು ಈಗ ಅದು ಯಾವುದಕ್ಕೂ ತಲೆಕೆಡಿಸಿಕೊಳ್ಳದೆ ನಿರುಮ್ಮಳವಾಗಿದ್ದಾರೆ. ಕಳೆದ ಒಂದು ವಾರದಿಂದ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ಗ್ರಾಮದ ಚರಂಡಿಗಳೆಲ್ಲ ತುಂಬಿ ರಸ್ತೆಯ ಮೇಲೆ ನೀರು ನಿಂತು ಕೆರೆಯಾಗಿ ಮಾರ್ಪಟ್ಟಿವೆ. ಇದರಿಂದ ಗ್ರಾಮಸ್ಥರು ಅಧಿಕಾರಿಗಳ ಮತ್ತು ಗ್ರಾಪಂ ಆಡಳಿತ ವ್ಯವಸ್ಥೆ ಮೇಲೆ ಹಿಡಿ ಶಾಪ ಹಾಕುತ್ತಿದ್ದಾರೆ. ಚುನಾವಣೆಯ ಸಂದರ್ಭದಲ್ಲಿ ಕೈಕಾಲು ಹಿಡಿದುಕೊಂಡು ಮತ ಪಡೆದುಕೊಂಡಿರುವ ಸದಸ್ಯರು ಇಲ್ಲಿವರೆಗೂ ಯಾವುದೇ ವಾರ್ಡ್‌ಗಳಲ್ಲಿ ಅಭಿವೃದ್ಧಿ ಕೆಲಸಗಳು ಮಾಡದೇ ಕೇವಲ ಸರ್ಕಾರದ ಕಡೆ ಬಟ್ಟು ಮಾಡುತ್ತಿರುವುದು ಎಷ್ಟರಮಟ್ಟಿಗೆ ಸರಿ ?.ಎಲ್ಲವೂ ರಾಜ್ಯ ಸರ್ಕಾರವೇ ಮಾಡಬೇಕಾದರೆ ಸ್ಥಳೀಯ ಗ್ರಾಪಂ ಏಕೆ ಬೇಕು ಎನ್ನುವ ಪ್ರಶ್ನೆ ಸಾರ್ವಜನಿಕರಲ್ಲಿ ಕಾಡುತ್ತಿದೆ. ಸರಕಾರ ಪ್ರತಿ ವರ್ಷ ಹಳ್ಳಿಗಳ ಅಭಿವೃದ್ಧಿಗಾಗಿ ಕೋಟ್ಯಾಂತರ ರೂಪಾಯಿ ಹಣ ಬಿಡುಗಡೆ ಮಾಡುತ್ತಿದ್ದರು ಸಹ ಹಳ್ಳಿಗಳು ಮಾತ್ರ ಇನ್ನೂ ಅಭಿವೃದ್ಧಿ ಆಗುತ್ತಿಲ್ಲ. ಕರಜಗಿ ಗ್ರಾಪಂ ಸದಸ್ಯರು ಕೇವಲ ತಮ್ಮ ವೈಯಕ್ತಿಕ ಕೆಲಸ ಕಾರ್ಯಗಳಲ್ಲಿ ನಿರತರಾಗಿದ್ದಾರೆ ಹೊರತು ತಮಗೆ ಮತ ಹಾಕಿ ಗೆಲ್ಲಿಸಿರುವ ವಾರ್ಡಿನ ಮತದಾರರ ಸಮಸ್ಯೆಯನ್ನು ಕೇಳುವ ಮನಸ್ಥಿತಿಯನ್ನು ಉಳಿಸಿಕೊಂಡಿಲ್ಲ. ಕೇವಲ ಶಾಸಕರು ಅಥವಾ ಮೇಲಾಧಿಕಾರಿಗಳು ಗ್ರಾಮಕ್ಕೆ ಭೇಟಿ ಕೊಟ್ಟಾಗ ಅವರ ಮುಂದೆ ಬಂದು ಫೋಟೋಗೆ ಪೋಲೀಸ್ ಕೊಟ್ಟು ಹೋಗುತ್ತಿದ್ದಾರೆ ಅಷ್ಟೇ. ಆದರೆ ಕಳೆದ ಬಾರಿ ತಾಪಂ ಉಪಾಧ್ಯಕ್ಷರಾಗಿದ್ದ ಭೀಮಾಶಂಕರ ಹೊನ್ನಕೇರಿ ತಮ್ಮ ಅವಧಿಯಲ್ಲಿ

ಎರಡು ವರ್ಷಗಳು ಕಳೆದರೂ ಸಹ ಇಲ್ಲಿಯವರೆಗೂ ಗ್ರಾಮಕ್ಕೆ ಯಾವುದೇ ಅನುದಾನ ನೀಡಿಲ್ಲ, ಒಂದೇ ಒಂದು ಕಾಮಗಾರಿ ಮಾಡಿಲ್ಲ, ಇದನ್ನು ಕೇಳಿದರೆ ಸಬೂಬು ಹೇಳುತ್ತಾರೆ.ಇನ್ನಾದರೂ ಜಿಲ್ಲಾಡಳಿತ ಎಚ್ಚೆತ್ತುಕೊಂಡು ಗ್ರಾಮದ ಸಮಸ್ಯೆಗಳಿಗೆ ಪರಿಹಾರ ನೀಡಬೇಕೆಂದು ಗ್ರಾಮಸ್ಥರ ಆಗ್ರಹವಾಗಿದೆ.

ಅಫಜಲಪುರ ತಾಪಂ ಮಾಜಿ ಉಪಾಧ್ಯಕ್ಷ ಭೀಮಾಶಂಕರ ಹೊನ್ನಕೇರಿ ಅವರ ಸಂದರ್ಭದಲ್ಲಿ ಕರಜಗಿ ಗ್ರಾಮದಲ್ಲಿ ಸಿಸಿರಸ್ತೆ, ಚರಂಡಿ, ಕೊಳವೆ ಬಾವಿ, ಶಾಲಾ ಕಟ್ಟಡಗಳು ಸೇರಿದಂತೆ ಅನೇಕ ಅಭಿವೃದ್ಧಿ ಕಾಮಗಾರಿಗಳು ನಡೆದಿವೆ. ಆದರೆ ಈಗ ಕರಜಗಿ ಗ್ರಾಪಂ ಆಡಳಿತ ವ್ಯವಸ್ಥೆ ಹಾಳಾಗಿ ಹೋಗಿದೆ.ಸದಸ್ಯರಿಗೆ ಯಾರೂ ಕೇಳೋರಿಲ್ಲ, ಹೇಳೋರಿಲ್ಲ ಎಂಬಂತಾಗಿದೆ.,ಗ್ರಾಮದ ಅಭಿವೃದ್ಧಿ ಮಾತ್ರ ಬೇಡ ಎನ್ನುವಂತಾಗಿದೆ.ಈ ಸಂದರ್ಭದಲ್ಲಿ ತಾಪಂ ಉಪಾಧ್ಯಕ್ಷ ಭೀಮಾಶಂಕರ ಹೊನ್ನಕೇರಿ ಹಿಡಿತದಲ್ಲಿ ಗ್ರಾಪಂ ಇದ್ದರೆ ಅಭಿವೃದ್ಧಿ ಕಾಮಗಾರಿಗಳು ನಿರಂತರವಾಗಿ ನಡೆಯುತ್ತಿದ್ದವು. ಆದರೆ ಈಗ ಯಾವುದೇ ಕಾಮಗಾರಿಗಳು ನಡೆಯುತ್ತಿಲ್ಲ ಎನ್ನುವುದು ಗ್ರಾಮಸ್ಥರ ಹೇಳಿಕೆಯಾಗಿದೆ.

# ಅಮೃತ ಸರೋವರಗಳಿಗೆ ನೀರು



**ಇಂಡಿ, ಮೇ.26**–ತಾಲೂಕಿನಲ್ಲಿ ಮಳೆಯು ಚೆನ್ನಾಗಿ ಆಗುತ್ತಿರುವದರಿಂದ ನರೇಗಾ ಯೋಜನೆಯಡಿ ನಿರ್ಮಾಣ ಗೊಂಡ ಅಮೃತ ಸರೋವರಗಳಲ್ಲಿ ನೀರು ಬಂದಿದೆ ಎಂದು ಇಒ ನಂದೀಪ ರಾಠೋಡ ತಿಳಿಸಿದರು.

ತಾ.ಪಂ ಸಭಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಬಬಲಾದ,ನಿಂಬಾಳ ಕೆಡಿ, ಬಸನಾಳ, ಝಳಕಿ, ಕಪನಿಂಬರಗಿ, ಕೋಳುರಗಿ ಅಮೃತ ಸರೋವರಗಳಿಗೆ ನೀರು ಬಂದಿದೆ.

ಇದು ಗ್ರಾಮಸ್ಥರಿಗೆ ಮತ್ತು ಸುತ್ತ ಮುತ್ತಲಿನ ಪ್ರದೇಶದ ಜನರಿಗೆ ಜನಜಾನುವಾರುಗಳಿಗೆ, ಪ್ರಾಣಿ ಪಕ್ಷಿಗಳಿಗೆ ಅನುಕೂಲವಾಗಲಿದೆ ಎಂದರು. ರೈತರಿಗೆ ಅಂತರ್ಜಲ ಮಟ್ಟ ಹೆಚ್ಚಾಗಿ ಕೃಷಿಗೆ ಪೂರಕ ವಾಗಿದೆ.ಬೊರ ಮತ್ತು ಭಾವಿಗಳಿಗೆ ನೀರಿನ ಮಟ್ಟ ಹೆಚ್ಚಾಗಿ ಕೃಷಿ ಚಟುವಟಿಕೆಗಳಿಗೆ ಅನುಕೂಲ ವಾಗುತ್ತಿದೆ ಎಂದರು.

# ಜಾತಿ ಜನಗಣತಿ:ಎನ್‌ಡಿಎ ಸಿಎಂಗಳ ಮಹತ್ವದ ಸಭೆ

**ನವದೆಹಲಿ,ಮೇ.26–** ರಾಷ್ಟ್ರೀಯ ಭದ್ರತೆ, ಮುಂಬರುವ ಜಾತಿ, ಜನಗಣತಿ ಮತ್ತು ಎನ್‌ಡಿಎ ಆಡಳಿತವಿರುವ ರಾಜ್ಯಗಳಲ್ಲಿ ಆಡಳಿತ ತಂತ್ರಗಳು, ಅಭಿವೃದ್ಧಿ, ಮೂಲ ಸೌಕರ್ಯಕ್ಕೆ ಆದ್ಯತೆ ಸೇರಿದಂತೆ ವಿವಿಧ ವಿಷಯಗಳ ಮೇಲೆ ಕೇಂದ್ರೀಕರಿಸಿ ಪ್ರಧಾನಿ ನರೇಂದ್ರ ಮೋದಿ ಅವರು ದೆಹಲಿಯಲ್ಲಿಂದು ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ (ಎನ್‌ಡಿಎ) ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳ ಉನ್ನತ ಮಟ್ಟದ ಸಭೆ ನಡೆಸಿದರು

ಸಭೆಯಲ್ಲಿ ಎನ್‌ಡಿಎ ಆಡಳಿತವಿರುವ ರಾಜ್ಯಗಳ ಸುಮಾರು 20 ಮುಖ್ಯಮಂತ್ರಿಗಳು ಮತ್ತು 18 ಉಪ ಮುಖ್ಯಮಂತ್ರಿಗಳು ಭಾಗವಹಿಸಿದ್ದಾರೆ. ಇವರ ಜೊತೆಗೆ ಪಕ್ಷದ ಅಧ್ಯಕ್ಷ ಜೆಪಿ ನಡ್ಡಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಿರಿಯ ಬಿಜೆಪಿ ನಾಯಕರು ಸಹ ಚರ್ಚೆಗಳಲ್ಲಿ ಭಾಗವಹಿಸಿದ್ದು ದಿನಪೂರ ಚರ್ಚೆ ನಡೆಯಲಿದೆ.ರಾಷ್ಟ್ರೀಯ ಭದ್ರತೆ ಮತ್ತು ಆಪರೇಷನ್ ಸಿಂಧೂರ್. ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಒಂಬತ್ತು ಭಯೋತ್ಪಾದಕ ಕೇಂದ್ರಗಳನ್ನು ಗುರಿಯಾಗಿಸಿಕೊಂಡು ಭಾರತ ಇತ್ತೀಚೆಗೆ ನಡೆಸಿದ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯಾದ ಆಪರೇಷನ್ ಸಿಂಧೂರಿನ ಯಶಸ್ಸಿಗಾಗಿ ಸಶಸ್ತ್ರ ಪಡೆಗಳು ಮತ್ತು ಪ್ರಧಾನಿ ನರೇಂದ್ರ ಮೋದಿಯವರನ್ನು ಅಭಿನಂದಿಸಲು ಸಭೆ ನಿರ್ಣಯ ಅಂಗೀಕರಿಸಲು ನಿರ್ಧರಿಸಿದೆ.

ದೇಶದಲ್ಲಿ ಸಾಮಾಜಿಕ ನ್ಯಾಯದತ್ತ ಮಹತ್ವದ ಹೆಜ್ಜೆ ಗುರುತಿಸುವ ಮುಂಬರುವ ರಾಷ್ಟ್ರೀಯ ಜನಗಣತಿಯಲ್ಲಿ ಜಾತಿ ಜನಗಣತಿಯನ್ನು ಸೇರಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಸಭೆಯಲ್ಲಿ ಶ್ಲಾಘಿಸಿ ಅಂಗೀಕರಿಸಲಿದೆ ಎಂದು ಉನ್ನತ ಮೂಲಗಳು ತಿಳಿಸಿವಎನ್‌ಡಿಎ ಮೈತ್ರಿಕೂಟದಾದ್ಯಂತ ಸಹಯೋಗ ಬೆಳೆಸುವ ಮತ್ತು ನವೀನ ಆಡಳಿತ ಮಾದರಿ ಹಂಚಿಕೊಳ್ಳುವ ಗುರಿ ಹೊಂದಿರುವ ಮುಖ್ಯಮಂತ್ರಿಗಳು ತಮ್ಮ ತಮ್ಮ ರಾಜ್ಯಗಳಿಂದ ಪರಿಣಾಮಕಾರಿ ಉಪಕ್ರಮಗಳು ಮತ್ತು ಯೋಜನೆಗಳನ್ನು ಪ್ರಸ್ತುತಪಡಿಸಲಿದ್ದಾರೆ.

ಗಡಿಯುದ್ದಕ್ಕೂ ಭಾರತದ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯ ನಂತರ ರಾಷ್ಟ್ರೀಯ ಭದ್ರತೆಯ ಕುರಿತು ಎನ್‌ಡಿಎ ಸರ್ಕಾರದ ನಿಲುವನ್ನು ಬಲಪಡಿಸಲು ಮತ್ತು ಏಕೀಕೃತ ಸಂದೇಶವನ್ನು ಕಳುಹಿಸಲು ಈ ಸಭೆಯನ್ನು ಸಂಘಟಿತ ಪ್ರಯತ್ನವೆಂದು ನೋಡಲಾಗುತ್ತಿದೆ.'ವಿಕ್ಷಿತ್ ರಾಜ್ಯಕ್ಕಾಗಿ ವಿಕ್ಷಿತ್ ಭಾರತ ವಿಷಯದ ಕುರಿತು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನೀತಿ ಆಯೋಗದ 10 ನೇ ಆಡಳಿತ ಮಂಡಳಿ ಸಭೆಯ ಒಂದು ದಿನದ ನಂತರ ಈ ಸಭೆ ನಡೆದಿದ್ದು ಮಹತ್ವ ಪಡೆದುಕೊಂಡಿದೆ.



### ಯಾರೆಲ್ಲಾ ಭಾಗಿ

ಪ್ರಧಾನಿ ಮೋದಿ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಎನ್‌ಡಿಎ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳ ಸಭೆಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಮತ್ತು ಕೇಂದ್ರ ಸಚಿವ ಜೆ.ಪಿ. ನಡ್ಡಾ ಪಾಲ್ಗೊಂಡಿದ್ಧಾರೆ.

ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಮತ್ತು ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ, ನಾಗಾಲ್ಯಾಂಡ್ ಮುಖ್ಯಮಂತ್ರಿ ನೀಫಿಯು ರಿಯೊ ಮತ್ತು ಉಪಮುಖ್ಯಮಂತ್ರಿಗಳಾದ ಟಿ.ಆರ್. ಝೆಲಿಯಾಂಗ್ ಮತ್ತು ಯಂತುಂಗೊ ಪ್ಯಾಟನ್ ಸೇರಿದಂತೆ 20 ಮುಖ್ಯಮಂತ್ರಿಗಳು, 18 ಉಪ ಮುಖ್ಯಮಂತ್ರಿಗಳು ಸಭೆಯಲ್ಲಿ ಭಾಗಿಯಾಗಿದ್ದಾರೆ.

# ಭಯೋತ್ಪಾದನೆ ವಿರುದ್ಧ ಜಗತ್ತು ಒಗ್ಗೂಡಲಿ




**ವಾಷಿಂಗ್ಟನ್,ಮೇ26–** ಭಯೋತ್ಪಾದನೆಯ ವಿರುದ್ಧ ಒಗ್ಗಟ್ಟಿನಿಂದ ಹೋರಾಡಲು ಜಗತ್ತು ಒಟ್ಟಾಗಿ ಸೇರಬೇಕೆಂದು ಕಾಂಗ್ರೆಸ್ ಸಂಸದ ಶಶಿ ತರೂರ್ ಕರೆ ಕೊಟ್ಟಿದ್ದಾರೆ.

ಪಹಲ್ಗಾಮ್ ದಾಳಿಯಲ್ಲಿ 26 ಜನರನ್ನು ಬಲಿತೆಗೆದುಕೊಂಡ ನಂತರ, ಪಾಕ್‌ನಲ್ಲಿರುವ ಉಗ್ರರ ನೆಲೆಗಳನ್ನು ಭಾರತ ಉಡೀಸ್ ಮಾಡಿದ ಕ್ರಮಗಳು ಬಗ್ಗೆ ಅಮೇರಿಕದ ನಗರದಲ್ಲಿ9/11 ಸ್ಮಾರಕಕ್ಕೆ ಸರ್ವಪಕ್ಷ ನಿಯೋಗದ ಸದಸ್ಯರ ಭೇಟಿ ನೀಡಿದ ಬಳಿಕ ಭಾರತೀಯ ಕಾನ್ಸುಲೇಟ್‌ನಲ್ಲಿ ಭಾರತದ ಮೇಲೆ ಉಗ್ರರ ದಾಳಿಗಳ ಕುರಿತು ಮಾತನಾಡಿದರು.

ಪಹಲ್ಗಾಮ್ ಉಗ್ರರ ದಾಳಿಯು ನಮಗೆ ಭಾವನಾತ್ಮಕ ವಿಚಾರ. ದೇಶದ ಕ್ರೂರ ಭಯೋತ್ಪಾದಕ ದಾಳಿಯ ಗಾಯಗಳನ್ನು ಇನ್ನೂ ಹೊಂದಿರುವ ನಾವಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಹೋಗುತ್ತಿರುವ ಪ್ರತಿಯೊಂದು ದೇಶದಲ್ಲೂ ಸಾರ್ವಜನಿಕ ಮತ್ತು ರಾಜಕೀಯ ಅಭಿಪ್ರಾಯದ ವಿವಿಧ ವರ್ಗಗಳೊಂದಿಗೆ ಮಾತನಾಡುವುದು ನಮ್ಮ ಆಲೋಚನೆಯಾಗಿದೆ. ಭಯೋತ್ಪಾದನಾ ಕೃತ್ಯಗಳು ಜಗತ್ತಿನಾದ್ಯಂತ ಜನತೆಗೆ ತೊಂದರೆಯಾಗಿದೆ. ಮೂಲಭೂತ ಸಮಸ್ಯೆ ಉಳಿದಿದೆ ಎಂದು ಹೇಳಿದ್ದಾರೆ.

ಜನರ ಧರ್ಮವನ್ನು ಕೇಳಿ ಉಗ್ರರು ಗುಂಡಿಕ್ಕಿ ಜನರನ್ನು ಕೊಂದಿದ್ದಾರೆ. ಮೃತರಲ್ಲಿ ಹೆಚ್ಚಿನವರು ಹಿಂದೂಗಳಾಗಿದ್ದಾರೆ. ದುಷ್ಕೃತ್ಯ ನಡೆದ ಒಂದು ಗಂಟೆಯೊಳಗೆ, ರೆಸಿಸ್ಟೆನ್ಸ್ ಫ್ರಂಟ್ ಎಂಬ ಗುಂಪು ಇದಕ್ಕೆ ಕಾರಣ ಎಂದು ಹೇಳಿಕೊಂಡಿತ್ತು. ರೆಸಿಸ್ಟೆನ್ಸ್ ಫ್ರಂಟ್ ಕೆಲವು ವರ್ಷಗಳಿಂದ ನಿಷೇಧಿತ ಲಷ್ಕರ್ ಇ–ತೊಯ್ಬಾ ಸಂಘಟನೆಯ ಭಾಗವಾಗಿದೆ. ಇದನ್ನು ಅಮೆರಿಕ ಭಯೋತ್ಪಾದಕ ಸಂಘಟನೆ ಎಂದು ಘೋಷಿಸಲಾಗಿದೆ ಎಂದು ಉಲ್ಲೇಖಿಸಲಾಗಿದೆ ಎಂದಿದ್ದಾರೆ9 ನಿರ್ದಿಷ್ಟ ಭಯೋತ್ಪಾದಕ ನೆಲೆಗಳು, ಪ್ರಧಾನ ಕಚೇರಿಗಳು ಮತ್ತು ಲಾಂಚ್‌ಪ್ಯಾಡ್‌ಗಳ ಮೇಲೆ ನಿಖರವಾದ ಭಾರತ ನಿಖರವಾದ ದಾಳಿ ನಡೆಸಿದೆ. ಭಯೋತ್ಪಾದನೆ ವಿರುದ್ಧ ಭಾರತ ಸ್ಪಷ್ಟ ಸಂದೇಶ ರವಾನಿಸಿದೆ. ಇದು ದೀರ್ಘಾವಧಿಯ ಯುದ್ಧದಲ್ಲಿ ಆರಂಭಿಕ ದಾಳಿಯಲ್ಲ, ಬದಲಾಗಿ ಕೇವಲ ಪ್ರತೀಕಾರದ ಕ್ರಮವಾಗಿದೆ. ಆ ಕೃತ್ಯವನ್ನು ನಿಲ್ಲಿಸಲು ನಾವು ಸಿದ್ಧರಿದ್ದೇವೆ ಎಂಬ ಸಂದೇಶವನ್ನು ರವಾನಿಸಿದೆ ಎಂದು ತರೂರ್‌ಗೆ ಸ್ಪಷ್ಟ ಸಂದೇಶ ರವಾನಿಸಿದೆ.

# ರೇವ್ ಪಾರ್ಟಿ ಮೇಲೆ ಪೊಲೀಸರ ದಾಳಿ




**ಬೆಂಗಳೂರು, ಮೇ26–** ನಗರ ಹೊರವಲಯದ ರೆಸಾರ್ಟ್‌ವೊಂದರಲ್ಲಿ ನಡೆಯುತ್ತಿದ್ದ ರೇವ್ ಪಾರ್ಟಿ ಮೇಲೆ ದೇವನಹಳ್ಳಿ ಠಾಣೆ ಪೊಲೀಸರು ದಾಳಿ ನಡೆಸಿ ನಶೆಯಲ್ಲಿ ತೇಲಾಡುತ್ತಿದ್ದ ಸುಮಾರು 31ಕ್ಕೂ ಹೆಚ್ಚು ಯುವಕ–ಯುವತಿಯರನ್ನು ವಶಕ್ಕೆ ಪಡೆದಿದ್ದಾರೆ. ದೇವನಹಳ್ಳಿಯ ಕನ್ನಮಂಗಲ ಸಮೀಪದ ಫಾರ್ಮ್ ಹೌಸ್‌ನಲ್ಲಿ ರೇವ್ ಪಾರ್ಟಿ ನಡೆಯುತ್ತಿರುವ ಬಗ್ಗೆ ಖಚಿತ ಮಾಹಿತಿ ಪಡೆದು ಎಸಿಪಿ ನವೀನ್ ನೇತೃತ್ವದಲ್ಲಿ ಪೊಲೀಸರ ತಂಡ ತಡರಾತ್ರಿ ದಾಳಿ ಮಾಡಿದೆ.

ಪೊಲೀಸರು ಬಂದಾಗಲೂ ಕೆಲವರು ಮಾದಕದ ನಶೆಯಲ್ಲಿ ತೂರಾಡುತ್ತಿದ್ದರು. ನಂತರ ಅವರನ್ನು ವಶಕ್ಕೆ ಪಡೆಯಲಾಗಿದೆ. ಫಾರ್ಮ್ ಹೌಸ್ ಪರಿಶೀಲನೆ ವೇಳೆ ಗಾಂಜಾ, ಕೊಕೈನ್ ಸೇರಿದಂತೆ ಹಲವು ಮಾದಕ ವಸ್ತುಗಳು ಪತ್ತೆಯಾಗಿವೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಈ ಸಂಜೆಗೆ ತಿಳಿಸಿದ್ದಾರೆ.

ಏಳು ಮಂದಿ ಯುವತಿಯರು ಹಾಗೂ 24 ಮಂದಿ ಯುವಕರನ್ನು ಪೊಲೀಸರು ವಶಕ್ಕೆ ಪಡೆದು ಎಲ್ಲರ ರಕ್ತಪರೀಕ್ಷೆ ಮಾಡಿಸಲಾಗುತ್ತಿದೆ. ಈ ಪಾರ್ಟಿಯಲ್ಲಿ ಬಹುತೇಕ ಮಂದಿ ಹೊರ ರಾಜ್ಯಗಳ ಸಾಫ್ಟ್‌ವೇರ್ ಇಂಜಿನಿಯರ್‌ಗಳು ಇದ್ದಾರೆ ಎಂದು ತಿಳಿದುಬಂದಿದೆ.ಜಿಟಿ ಜಿಟಿ ಮಳೆಯ ನಡುವೆಯೂ ಜೋರು ಡಿಜೆ ಶಬ್ದ ಹಾಗೂ ಮಾದಕ, ಮದ್ಯದ ನಶೆಯಲ್ಲಿ ಇವರೆಲ್ಲರೂ ತೇಲಾಡುತ್ತಿದ್ದರು ಎಂದು ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಫಾರ್ಮ್ ಹೌಸ್‌ನ ಮೇಲ್ವಿಚಾರಕನನ್ನು ಪೊಲೀಸರು ವಶಕ್ಕೆ ತೆಗೆದುಕೊಂಡು ವಿಚಾರಣೆಗೊಳಪಡಿಸಿದ್ದಾರೆ. ಈ ರೇವ್ ಪಾರ್ಟಿಯನ್ನು ಆಯೋಜಿಸಿದ'ವರು ಯಾರು? ಈ ಪಾರ್ಟಿಗೆ ಮಾದಕವಸ್ತುಗಳನ್ನು ಸರಬರಾಜು ಮಾಡಿದವರ ಯಾರು ಎಂಬುದರ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಫಾರ್ಮ್ ಹೌಸ್‌ನ ತುಂಬೆಲ್ಲ ಮದ್ಯದ ಬಾಟಲ್ ಸೇರಿದಂತೆ ಹಲವಾರು ವಸ್ತುಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿದೆ. ಪೊಲೀಸರನ್ನು ಕಂಡು ಕೆಲವರು ಪರಾರಿಯಾಗಿದ್ದಾರೆ ಎಂದು ತಿಳಿದುಬಂದಿದೆ. ಈ ಬಗ್ಗೆ ದೇವನಹಳ್ಳಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಪ್ರತಿಕೂಲ ಹವಾಮಾನದಿಂದ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಿಮಾನಗಳ ಹಾರಾಟದಲ್ಲಿ ವ್ಯತ್ಯಯ



**ನವದೆಹಲಿ,ಮೇ 26–** ರಾತ್ರಿಯಿಡೀ ಗುಡುಗು ಸಹಿತ ಸುರಿದ ಭಾರೀ ಮಳೆಯಿಂದಾಗಿ ರಾಷ್ಟ್ರ ರಾಜಧಾನಿ ನವದೆಹಲಿಯ ದೇಶದ ಅತಿದೊಡ್ಡ ಐಜಿಐ ವಿಮಾನ ನಿಲ್ದಾಣದಲ್ಲಿ ಇಳಿಯಬೇಕಿದ್ದ 17 ಅಂತರರಾಷ್ಟ್ರೀಯ ವಿಮಾನಗಳು ಸೇರಿದಂತೆ 49 ವಿಮಾನಗಳ ಮಾರ್ಗ ಬದಲಾವಣೆ ಮಾಡಲಾಗಿದೆ.

ತಡ ರಾತ್ರಿ 11.30 ರಿಂದು ಬೆಳಿಗ್ಗೆ 5.30 ರವರೆಗೆ 81.2 ಮಿಮೀ ಮಳೆಯಾಗಿದೆ ಗಂಟೆಗೆ 82 ಕಿ.ಮೀ ವೇಗದಲ್ಲಿ ಗಾಳಿ ಬೀಸಿದೆ ಎಂದು ನಗರದ ಹವಾಮಾನ ಕೇಂದ್ರ ತಿಳಿಸಿದೆ.

ಕೆಟ್ಟ ಹವಾಮಾನದಿಂದಾಗಿ ದೇಶೀಯ ಹಾಗು ಅಂತರರಾಷ್ಟ್ರೀಯ ವಿಮಾನಗಳ ಹಾರಾಟದಲ್ಲಿ ವ್ಯತ್ಯಯ ಉಂಟಾಗಿದೆ.ಮುಂಜಾನೆ 3:59 ಕ್ಕೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಇಂಡಿಗೋ, ದೆಹಲಿಯಲ್ಲಿನ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು ವಿಮಾನ ಕಾರ್ಯಾಚರಣೆಯಲ್ಲಿ ತಾತ್ಕಾಲಿಕ ಅಡಚಣೆಗಳಿಗೆ ಕಾರಣವಾಗಿವೆ ಎಂದು ಹೇಳಿದೆ. ಹವಾಮಾನ ಕ್ರಮೇಣ ಕಡಿಮೆಯಾಗುತ್ತಿದ್ದರೂ, ವಿಮಾನಗಳ ದಟ್ಟಣೆ ಸ್ವಲ್ಪ ಮಟ್ಟಿಗೆ ಕಡಿಮೆಯಾಗಿದೆ. ಪರಿಸ್ಥಿತಿಗಳು ಅನುಕೂಲಕರವಾಗುತ್ತಿದ್ದಂತೆ ವಿಮಾನಗಳ ಸಂಚಾರ ಸ್ಥಿರವಾಗಿ ಪುನರಾರಂಭಗೊಳ್ಳುತ್ತಿದೆ ಎಂದು ನಾವು ನಿಮಗೆ ಭರವಸೆ ನೀಡುತ್ತೇವೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

ಬೆಳಿಗ್ಗೆ 6ಗಂಟೆಗೆ ವಿಮಾನ ಕಾರ್ಯಾಚರಣೆಗಳು ಸಾಮಾನ್ಯ ಸ್ಥಿತಿಗೆ ಮರಳಿದ್ದು, ದೆಹಲಿಯ ಮೇಲೆ ಸ್ಪಷ್ಟ ಆಕಾಶವಿದೆ. ಫ್ಲೈಟ್ ಟ್ರ್ಯಾಕಿಂಗ್ ವೆಬ್‌ಸೈಟ್‌ನಲ್ಲಿ ದೆಹಲಿ ವಿಮಾನ ನಿಲ್ದಾಣದಲ್ಲಿ ಸುಮಾರು 180 ವಿಮಾನಗಳು ವಿಳಂಬವಾಗಿವೆ ಮತ್ತು ಕೆಲವು ರದ್ದಾಗಿವೆ ಎಂದು ತೋರಿಸಿದೆ.

# ಪಾಕ್ ಸೇನೆ ಮೇಲೆ ದಾಳಿ: ಬಾಂಬ್ ಸ್ಫೋಟದಲ್ಲಿ 32 ಸೈನಿಕರ ಬಲಿ

**ಕರಾಚಿ, ಮೇ26–** ಪಾಕಿಸ್ತಾನದಲ್ಲಿ ಮತ್ತೊಮ್ಮೆ ಸೇನೆ ಮೇಲೆ ಬಹುದೊಡ್ಡ ದಾಳಿ ನಡೆದಿದ್ದು, ಬಲೂಚಿಸ್ತಾನದಲ್ಲಿ ಸೇನಾ ಬೆಂಗಾವಲು ಪಡೆಯ ಮೇಲೆ ನಡೆದ ದಾಳಿಯಲ್ಲಿ ಮೃತದೇಹಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿವೆ.

ಕರಾಚಿ–ಕ್ವೆಟ್ಟಾ ಹೆದ್ದಾರಿಯ ಖುಜ್ದಾರ್‌ನ ಝುರೊ ಪಾಯಿಂಟ್ ಬಳಿ ನಡೆದ ಬಾಂಬ್ ಸ್ಫೋಟದಲ್ಲಿ ಕನಿಷ್ಠ 32 ಪಾಕಿಸ್ತಾನಿ ಸೈನಿಕರು ಸಾವನ್ನಪ್ಪಿ, ಡಜನ್‌ಗಟ್ಟಲೇ ಜನರು ಗಾಯಗೊಂಡಿದ್ದಾರೆ ಎಂದು ತಿಳಿದುಬಂದಿದೆ. ಎಂಟು ವಾಹನಗಳ ಬೆಂಗಾವಲು ಪಡೆಯ ಮೇಲೆ ದಾಳಿ ನಡೆದಿದ್ದು, ನಿಲ್ಲಿಸಿದ್ದ ಕಾರಿನಲ್ಲಿ ಇರಿಸಲಾಗಿದ್ದ ಸ್ಫೋಟಕ (ವಾಹನದಿಂದ ಸಾಗಿಸಬಹುದಾದ ಸುಧಾರಿತ ಸ್ಫೋಟಕ ಸಾಧನ)ಗಳು ಸ್ಫೋಟಗೊಂಡಿವೆ. ಬಸ್ ಸೇರಿದಂತೆ ಮೂರು ವಾಹನಗಳು ನೇರವಾಗಿ ಬಾಂಬ್ ಸ್ಫೋಟದ ತೀವ್ರತೆಗೆ ನಜ್ಜುಗುಜ್ಜಾಗಿವೆ ಎಂದು ಹೇಳಲಾಗುತ್ತಿದೆ.

ಪಾಕಿಸ್ತಾನಿ ಸೇನಾ ಸೈನಿಕರು ಮತ್ತು ಅವರ ಕುಟುಂಬ ಸದಸ್ಯರು ಅದರಲ್ಲಿ ಪ್ರಯಾಣಿಸುತ್ತಿದ್ದರು. ಈ ಸೇನಾ ಬೆಂಗಾವಲು ತಂಡವು ಎಂಟು ವಾಹನಗಳೊಂದಿಗೆ ಪ್ರಯಾಣಿಸುತ್ತಿದ್ದಾಗ, ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ ಕಾರಿನಲ್ಲಿ ಇದ್ದಕ್ಕಿದ್ದಂತೆ ದೊಡ್ಡ ಸ್ಫೋಟ ಸಂಭವಿಸಿದೆ.ಸ್ಫೋಟ ಎಷ್ಟು ಪ್ರಬಲವಾಗಿತ್ತೆಂದರೆ, ಬೆಂಗಾವಲು ಪಡೆಯ ಮೂರು ವಾಹನಗಳು ಸಂಪೂರ್ಣವಾಗಿ ಆವರಿಸಲ್ಪಟ್ಟವು, ಅದರಲ್ಲಿ ಒಂದು ಸೇನಾ ಸಿಬ್ಬಂದಿಯ ಕುಟುಂಬ ಸದಸ್ಯರನ್ನು ಕರೆದೊಯ್ಯುತ್ತಿದ್ದ ಬಸ್ ಆಗಿತ್ತು. ಮಿಲಿಟರಿ ಮೂಲಗಳ ಪ್ರಕಾರ, ಇದು ಪೂರ್ವ ನಿರ್ಧರಿತ ಆತ್ಮಹತ್ಯಾ ದಾಳಿಯಾಗಿದ್ದು, ಇದರಲ್ಲಿ ಹೆಚ್ಚಿನ ಪ್ರಮಾಣದ ಸ್ಫೋಟಕಗಳನ್ನು ಬಳಸಲಾಗಿದೆ. ಗಾಯಾಳುಗಳನ್ನು ತಕ್ಷಣ ಹತ್ತಿರದ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ಹಲವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಲಾಗಿದೆ. ಇದುವರೆಗೆ ಯಾವುದೇ ಭಯೋತ್ಪಾದಕ ಸಂಘಟನೆಗಳು ದಾಳಿಯ ಹೊಣೆಯನ್ನು ಹೊತ್ತುಕೊಂಡಿಲ್ಲ. ಆದರೆ ಬಲೂಚಿಸ್ತಾನದಲ್ಲಿ ಸಕ್ರಿಯವಾಗಿರುವ ಪ್ರತ್ಯೇಕತಾವಾದಿ ಗುಂಪುಗಳ ಮೇಲೆ ಅನುಮಾನ ಹೆಚ್ಚುತ್ತಿದೆ. ಈ ಪ್ರದೇಶದಲ್ಲಿ ಈ ಹಿಂದೆಯೂ ಸೇನಾ ಮತ್ತು ಭದ್ರತಾ ಪಡೆಗಳ ಬೆಂಗಾವಲು ವಾಹನಗಳ ಮೇಲೆ ದಾಳಿ ನಡೆಸಲಾಗಿತ್ತು.ಈ ದಾಳಿಯು ಪಾಕಿಸ್ತಾನಿ ಸೇನೆಯ ದುರ್ಬಲ ಭದ್ರತಾ ಕಾರ್ಯತಂತ್ರ ಮತ್ತು ಬಲೂಚ್ ದಂಗೆಕೋರರ ಬೆಳೆಯುತ್ತಿರುವ ಶಕ್ತಿಯ ಸಂಕೇತವಾಗಿದೆ ಎಂದು ವಿಶ್ಲೇಷಿಸಲಾಗಿದೆ.

ದಾಳಿಯ ಹಿನ್ನೆಲೆಯಲ್ಲಿ ಇಡೀ ಪ್ರದೇಶದಲ್ಲಿ ಹೈ ಅಲರ್ಟ್ ಘೋಷಿಸಲಾಗಿದ್ದು, ಭದ್ರತಾ ಪಡೆಗಳು ಬೃಹತ್ ಶೋಧ ಕಾರ್ಯಾಚರಣೆ ಪ್ರಾರಂಭಿಸಿವೆ. ಈ ಘಟನೆಯು ಪಾಕಿಸ್ತಾನದ ಆಂತರಿಕ ಭದ್ರತಾ ಸವಾಲುಗಳನ್ನು ಮತ್ತೊಮ್ಮೆ ಎತ್ತಿ ತೋರಿಸುತ್ತದೆ, ವಿಶೇಷವಾಗಿ ಬಲೂಚಿಸ್ತಾನದಂತಹ ಸೂಕ್ಷ್ಮ ಪ್ರದೇಶಗಳಲ್ಲಿ ದಶಕಗಳಿಂದ ಅಸ್ಥಿರತೆ ಮುಂದುವರೆದಿದೆ.

# ಭಯೋತ್ಪಾದನೆ ದಮನಕ್ಕೆ ಸಂಕಲ್ಪ

## ಸಶಸ್ತ್ರ ಪಡೆಗಳ ಶೌರ್ಯ ಪ್ರದರ್ಶನ ಪ್ರತಿಯೊಬ್ಬ ಭಾರತೀಯನ ಹೆಮ್ಮೆ–ಮೋದಿ

**ನವದೆಹಲಿ,ಮೇ.26–**ಇಡೀ ರಾಷ್ಟ್ರ ಭಯೋತ್ಪಾದನೆಯ ವಿರುದ್ಧ ಒಗ್ಗಟ್ಟಾಗಿದ್ದು ಕೋಪದಿಂದ ಕುದಿಯುತ್ತಿದೆ. ಪ್ರತಿಯೊಬ್ಬ ಭಾರತೀಯನ ಸಂಕಲ್ಪ ಭಯೋತ್ಪಾದನೆ ನಿರ್ಮೂಲನೆ ಮಾಡುವುದೇ ಆಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ

"ಆಪರೇಷನ್ ಸಿಂಧೂರ್ ಸಮಯದಲ್ಲಿ ಸಶಸ್ತ್ರ ಪಡೆಗಳು ಪ್ರದರ್ಶಿಸಿದ ಶೌರ್ಯ ಪ್ರತಿಯೊಬ್ಬ ಭಾರತೀಯನನ್ನು ಹೆಮ್ಮೆಪಡುವಂತೆ ಮಾಡಿದೆ. ಆಪರೇಷನ್ ಸಿಂಧೂರ್ ಪ್ರಪಂಚದಾದ್ಯಂತ ಭಯೋತ್ಪಾದನೆಯ ವಿರುದ್ಧದ ಹೋರಾಟಕ್ಕೆ ಹೊಸ ವಿಶ್ವಾಸ ಮತ್ತು ಉತ್ಸಾಹ ಜೊತೆಗೆ ದೇಶೀಯವಾಗಿ ತಯಾರಿಸಿದ ಶಸ್ತ್ರಾಸ್ತ್ರಗಳ ಪ್ರದರ್ಶನಕ್ಕೆ ಸೂಕ್ತ ವೇದಿಕೆಯಾಗಿದೆ ಎಂದಿದ್ಧಾರೆ.

ಆಕಾಶವಾಣಿಯ ಮನ್ ಕಿ ಬಾತ್ ಸರಣಿಯ 122 ನೇ ಸಂಚಿಕೆಯಲ್ಲಿ ದೇಶವಾಸಿಗಳನ್ನುದ್ದೇಶಿಸಿ ಮಾತನಾಡಿದ ಅವರು ಆಪರೇಷನ್ ಸಿಂಧೂರ್ ದೇಶದ ಜನರ ಮೇಲೆ ಎಷ್ಟು ಪ್ರಭಾವ ಬೀರಿದೆ ಎಂದರೆ ಅನೇಕ ಕುಟುಂಬಗಳು ಅದನ್ನು ತಮ್ಮ ಜೀವನದ ಭಾಗವನ್ನಾಗಿ ಮಾಡಿಕೊಂಡಿವೆ ಎಂದು ತಿಳಿಸಿದ್ದಾರೆ.


ಬಿಹಾರದ ಕತಿಹಾರ್, ಉತ್ತರ ಪ್ರದೇಶದ ಖುಷಿನಗರ ಮತ್ತು ಇತರ ಹಲವು ನಗರಗಳಲ್ಲಿ ಆಪರೇಷನ್ ಸಿಂಧೂರ್ ಅವಧಿಯಲ್ಲಿ ಜನಿಸಿದ ಮಕ್ಕಳಿಗೆ 'ಸಿಂದೂರ್' ಹೆಸರನ್ನು ನಾಮಕರಣ ಮಾಡಿದ್ದಾರೆ.

"ಗಡಿಯಾದ್ಯಂತ ಭಯೋತ್ಪಾದಕ ಅಡಗುತಾಣಗಳನ್ನು ಸೇನಾಪಡೆಗಳು ನಾಶಪಡಿಸಿದ ನಿಖರತೆ ಅಸಾಧಾರಣವಾಗಿದೆ. ಆಪರೇಷನ್ ಸಿಂಧೂರ್ ಕೇವಲ ಮಿಲಿಟರಿ ಕಾರ್ಯಾಚರಣೆಯಲ್ಲ, ಇದು ನಮ್ಮ ಸಂಕಲ್ಪ, ಧೈರ್ಯ ಮತ್ತು ರೂಪಾಂತರಗೊಳ್ಳುತ್ತಿರುವ ಭಾರತದ ಚಿತ್ರವಾಗಿದೆ. ಇಡೀ ದೇಶವನ್ನು ದೇಶಭಕ್ತಿಯ ಭಾವನೆಯಿಂದ ತುಂಬುವಂತೆ ಮಾಡಿದೆ. ತ್ರಿವರ್ಣದ ಬಣ್ಣಗಳಲ್ಲಿ ಎಲ್ಲೆಲ್ಲೂ ರಾಜಾಜಿಸುತ್ತಿವೆ ಎಂದು ಹೇಳಿದ್ದಾರೆ.

"ನಮ್ಮ ಸೈನಿಕರು ಭಯೋತ್ಪಾದಕ ನೆಲೆಗಳನ್ನು ನಾಶಪಡಿಸಿ ತಮ್ಮ ಅದಮ್ಯ ಧೈರ್ಯ, ಜೊತೆಗೆ ಭಾರತದಲ್ಲಿ ತಯಾರಿಸಿದ ಶಸ್ತ್ರಾಸ್ತ್ರಗಳು, ಉಪಕರಣಗಳು ಮತ್ತು ತಂತ್ರಜ್ಞಾನದ ಶಕ್ತಿಯ ಪ್ರದರ್ಶನವೂ ಆಗಿದೆ. ಈ ಅಭಿಯಾನದ ನಂತರ, ಇಡೀ ದೇಶದಲ್ಲಿ 'ಸ್ಥಳೀಯರಿಗಾಗಿ ಗಾಯನ'ದ ಬಗ್ಗೆ ನವೀಕೃತ ಶಕ್ತಿ ಗೋಚರಿಸುತ್ತಿದೆ ಎಂದಿದ್ದಾರೆ.

ನಮ್ಮ ಮಕ್ಕಳಿಗಾಗಿ ಭಾರತದಲ್ಲಿ ತಯಾರಿಸಿದ ಆಟಿಕೆಗಳನ್ನು ಮಾತ್ರ ಖರೀದಿಸುತ್ತೇವೆ. ದೇಶ ಪ್ರೇಮವು ಬಾಲ್ಯದಿಂದಲೇ ಪ್ರಾರಂಭವಾಗುತ್ತದೆ" .ಕೆಲವು ಕುಟುಂಬಗಳು ಮುಂದಿನ ರಜೆಯನ್ನು ದೇಶದ ಯಾವುದಾದರೂ ಸುಂದರ ಸ್ಥಳದಲ್ಲಿ ಕಳೆಯುತ್ತೇವೆ" ಎಂದು ಪ್ರತಿಜ್ಞೆ ಮಾಡಿದ್ದಾರೆ ಎಂದಿದ್ಧಾರೆ

**ಮಾವೋವಾದಿ ಮುಕ್ತ ಭಾರತದ ಗುರಿ:** "ಮಾವೋವಾದದ ವಿರುದ್ಧದ ಸಾಮೂಹಿಕ ಹೋರಾಟದ ಕಾರಣದಿಂದಾಗಿ, ಮೂಲಭೂತ ಸೌಲಭ್ಯಗಳು ಮಾವೋವಾದಿ ಹಿಂಸಾಚಾರ ಪೀಡಿತ



ಪ್ರದೇಶಗಳನ್ನು ತಲುಪಲು ಪ್ರಾರಂಭಿಸಿವೆ." "ಮಹಾರಾಷ್ಟ್ರದ ಗಡ್ಚಿರೋಲಿ ಜಿಲ್ಲೆಯ 'ಕಟೇಝರಿ' ಎಂಬ ಹಳ್ಳಿಯ ಬಗ್ಗೆ ನಿಮಗೆ ಹೇಳಲು ಬಯಸುತ್ತೇನೆ, ಅಲ್ಲಿಗೆ ಮೊದಲ ಬಾರಿಗೆ ಬಸ್ ತಲುಪಿದೆ. ಮಾವೋವಾದಿ ಮುಕ್ತ ಭಾರತದ ನಮ್ಮ ಮುಂದಿರುವ ಗುರಿ ಎಂದು ಮೋದಿ ತಿಳಿಸಿದರು.

ಮಹಾರಾಷ್ಟ್ರದ ಗಡ್ಚಿರೋಲಿ ಜಿಲ್ಲೆಯ ಕಟೇಝರಿ ಗ್ರಾಮದ ಜನರು ವರ್ಷಗಳಿಂದ ಈ ದಿನಕ್ಕಾಗಿ ಕಾಯುತ್ತಿದ್ದರು. ಇಲ್ಲಿಗೆ ಮೊದಲು ಬಸ್ ಓಡಲು ಸಾಧ್ಯವಾಗಲಿಲ್ಲ. ಗ್ರಾಮವು ಮಾವೋವಾದಿ ಹಿಂಸಾಚಾರದಿಂದ ಪ್ರಭಾವಿತವಾಗಿತ್ತು. ಬಸ್ ಮೊದಲ ಬಾರಿಗೆ ಗ್ರಾಮವನ್ನು ತಲುಪಿದಾಗ, ಜನರು ಢೋಲ್–ನಗರ ನುಡಿಸುವ ಮೂಲಕ ಅದನ್ನು ಸ್ವಾಗತಿದ್ದಾರೆ ಎಂದು ಹೇಳಿದ್ದಾರೆ

# ರಾಜಕೀಯ ಅಕಾಡೆಮಿ ತೆರೆಯಲು ಚಿಂತನೆ : ಯು.ಟಿ.ಖಾದರ್



**ಬೆಂಗಳೂರು,ಮೇ26–**ರಾಜಕೀಯ ಅಕಾಡೆಮಿ ತೆರೆಯಲು ಚಿಂತಿಸಲಾಗುತ್ತಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದರು. ಸಿಬ್ಬಂದಿ ಆಡಳಿತ ಸುಧಾರಣಾ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ವಿಧಾನಸಭೆ ಸಚಿವಾಲಯದ ಸಹಭಾಗಿತ್ವದಲ್ಲಿ ವಿಧಾನಸೌಧದ ಬಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ಮಾರ್ಗದರ್ಶಿ ನಡಿಗೆ ಪ್ರವಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜಕೀಯ ಕಾಲೇಜು ಆರಂಭಿಸಿ ತರಬೇತಿ ನೀಡುವ ಬಗ್ಗೆ ಕಾನೂನಾತ್ಮಕವಾಗಿ ಚರ್ಚೆ ಮಾಡಿ ಅನುಷ್ಠಾನದ ಬಗ್ಗೆ ನಿರ್ಧಾರ ಮಾಡುತ್ತೇವೆ. ವೈದ್ಯರಿಗೆ, ಇಂಜಿನಿಯರ್‌ಗಳಿಗೆ ಕಾಲೇಜುಗಳಿವೆ. ಆದರೆ ರಾಜಕಾರಣಿಯಾಗಲು ಕಾಲೇಜಿಲ್ಲ, ಅದಕ್ಕೊಂದು ಅಕಾಡೆಮಿ ಇದ್ದರೆ ಉತ್ತಮ ರಾಜಕಾರಣಿಯಾಗಲು ಅನುಕೂವಾಗಲಿದೆ ಎಂದರು.


ಮಾರ್ಗದರ್ಶಿ ಪ್ರವಾಸದ ಮೂಲಕ ವಿದ್ಯಾರ್ಥಿಗಳಿಗೆ ನಮ್ಮ ನಾಡಿನ ಇತಿಹಾಸ ಅರ್ಥಮಾಡಿಸುವ ಕೆಲಸವಾಗಲಿದೆ. ವಿದ್ಯಾರ್ಥಿಗಳು ಹಾಗೂ ಯುವ ಸಮುದಾಯ ದೇಶದ ಇತಿಹಾಸ ಅರ್ಥ ಮಾಡಿಕೊಳ್ಳಬೇಕು. ರಾಜ್ಯದ ಜನರು ವಿಧಾನಸೌಧ ನಮ್ಮದು ಎಂಬ ಭಾವನೆ ಮೂಡುವಂತೆ ಕಾರ್ಯಕ್ರಮ ರೂಪಿಸಿದ್ದೇವೆ ಎಂದು ಹೇಳಿದರು.

ವಿಧಾನಸೌಧ 70 ವರ್ಷದ ಹಳೆಯ ಕಟ್ಟಡವಾಗಿದ್ದು, ಇದರ ಬಗ್ಗೆ ಸಾರ್ವಜನಿಕರಲ್ಲಿ ಗೌರವದ ಭಾವನೆ ಮೂಡಬೇಕು. ನಮ್ಮ ದೇಶದ ಸಂವಿಧಾನ ಕೇವಲ ಕಾನೂನು ಗ್ರಂಥವಲ್ಲ. ಅದು ನಮ್ಮ ದೇಶದ ಧರ್ಮ ಗ್ರಂಥ, ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ವಿಧಾನಸೌಧದಿಂದಲೇ ಆಗಲಿದೆ. ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗದ ಮೂಲಕ ಹೇಗೆ ದೇಶ ನಡೆಯುತ್ತದೆ ಎಂಬುದನ್ನು ಜನರಿಗೆ ತಿಳಿಸುವ ಕಾರ್ಯಕ್ರಮವಾಗಲಿದೆ. 50 ರೂ. ಶುಲ್ಕ ಪಾವತಿಸಲಾಗದವರಿಗೆ ಉಚಿತ ಪ್ರವೇಶ ಕಲ್ಪಿಸುತ್ತೇವೆ ಎಂದರು.

ವಿಧಾನಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಮಾತನಾಡಿ, ನಾನು ವಿದ್ಯಾರ್ಥಿಯಾಗಿದ್ದಾಗ ವಿಧಾನಸೌಧ ವೀಕ್ಷಣೆಗೆ ಬಂದಿದ್ದೆ. ಪ್ರವಾಸಿಗರಿಗೆ ವಿಧಾನಸೌಧ ವೀಕ್ಷಣೆಗೆ ಅವಕಾಶ ಕಲ್ಪಿಸಿರುವುದು ಒಳ್ಳೆಯ ಬೆಳವಣಿಗೆ. ಶಕ್ತಿಸೌಧದ ಬಗ್ಗೆ ಜನರಿಗೆ ಸೂಕ್ತ ಮಾಹಿತಿ ನೀಡುವ ಕೆಲಸವಾಗಲಿದೆ ಎಂದು ಹೇಳಿದರು.

ಕಾನೂನು ಸಚಿವ ಎಚ್.ಕೆ.ಪಾಟೀಲ್ ಮಾತನಾಡಿ, ವಿಧಾನಸೌಧ ಪ್ರವಾಸ ಕಾರ್ಯಕ್ರಮವು ಮನೋರಂಜನೆಯ ಪ್ರವಾಸವಾಗ ಬಾರದು. ಶೈಕ್ಷಣಿಕ ಅಧ್ಯಯನದ ಪ್ರವಾಸವಾಗಬೇಕು. ಪ್ರಜಾಪ್ರಭುತ್ವದ ಮಹತ್ವವನ್ನು ತಿಳಿದುಕೊಳ್ಳುವಂತಾಗಬೇಕು ಎಂದರು. ವಿದ್ಯಾರ್ಥಿಗಳು ಮುಂದೆ ರಾಜಕೀಯ ಕ್ಷೇತ್ರಕ್ಕೂ ಬರಬೇಕು. ಉತ್ತಮ ರಾಜಕೀಯ ಪಟುಗಳಾಗಲು ಶಕ್ತಿಸೌಧ ಸ್ಫೂರ್ತಿ ನೀಡುವಂತಾಗಲಿದೆ ಎಂದು ಅವರು ಹಾರೈಸಿದರು.

# ಗಣೆನಾಡಿಗೆ ವಕ್ಕರಿಸಿದ ಕೋವಿಡ್



**ಬಳ್ಳಾರಿ, ಮೇ.26–** ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯಲ್ಲಿ ಸದ್ದಿಲ್ಲದೇ ಕೋವಿಡ್ ವಕ್ಕರಿಸಿದೆ, ಎರೆಡು ಜಿಲ್ಲೆಗಳ ತಲಾ ಒಬ್ಬರಿಗೆ ಕೊವಿಡ್ ಪಾಸಿಟಿವ್ ಉಸಿರಾಟದ ಸಮಸ್ಯೆ ಹಿನ್ನೆಲೆ ಆಸ್ಪತ್ರೆಗೆ ದಾಖಲಾಗಿದ್ದಾಗ ಕೊವಿಡ್ ತಪಾಸಣೆ ಮಾಡಲಾಗಿತ್ತು

ಆಗ ಇಬ್ಬರಿಗೆ ಕೊವೀಡ್ ಪಾಸಿಟಿವ್ ದೃಢಪಟ್ಟಿದೆ. ಬಳ್ಳಾರಿಯಲ್ಲಿ ಪಾಸಿಟಿವ್ ಆಗಿದ್ದ 40 ವರ್ಷದ ವ್ಯಕ್ತಿ ಈಗಾಗಲೇ ಗುಣಮುಖರಾಗಿ, ಚೇತರಿಸಿಕೊಂಡಿದ್ದಾರೆ ಇನ್ನೂ ಹೊಸಪೇಟೆಯ 35 ವರ್ಷದ ವ್ಯಕ್ತಿ ಹೋಂ ಹೈಸೋಲೇಷನ್ ನಲ್ಲಿದ್ದಾರೆ ಇಬ್ಬರಿಗೂ ಯಾವುದೇ ಟ್ರಾವೆಲ್ ಹಿಸ್ಟರಿ ಇಲ್ಲ ಹೊಸಪೇಟೆಯ ಕೊವಿಡ್ ಸೋಂಕಿತ ವ್ಯಕ್ತಿಯೂ ಈಗಾಗಲೇ ಚೇತರಿಸಿಕೊಳ್ತಿದ್ದಾರೆ.

ಉಸಿರಾಟದ ಸಮಸ್ಯೆ ಅಂತಾ ಆಸ್ಪತ್ರೆಗೆ ಬರುವ ಎಲ್ಲಾ ರೋಗಿಗಳಿಗೂ ಪ್ರತೀದಿನ ಕೊವಿಡ್ ತಪಾಸಣೆ ಮಾಡಲಾಗುತ್ತಿದೆ. ಆ ಪೈಕಿ ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಯಲ್ಲಿ ಒಬ್ಬೊಬ್ಬರಿಗೆ ಕೊವಿಡ್ ಇರೋದು ದೃಡಪಟ್ಟಿದೆ ಕೊವಿಡ್ ದೃಢ ಪಟ್ಟಿರೋದ್ರಿಂದ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡಿದೆ ಆರೋಗ್ಯ ಇಲಾಖೆ

# ಜಾಗತಿಕ ಜೀವ ವೈವಿಧ್ಯ ದಿನಾಚರಣೆ



**ವಿಜಯಪುರ,ಮೇ.26–**ಜೀವ ವೈವಿಧ್ಯ ದಿನದಂದು ನಗರದ ಜ್ಞಾನ ಯೋಗಾಶ್ರಮದಲ್ಲಿ ವಿಶಿಷ್ಟವಾಗಿ ಐದು ಜಾತಿಯ ಅಳವಿನಂಚಿನಲ್ಲಿರುವ ವಿವಿಧ ಜಾತಿಯ ಸಸಿಗಳನ್ನು ಆಶ್ರಮದ ಪೂಜ್ಯ ಸಂಗಮೇಶ್ವರ ಸ್ವಾಮಿಗಳು, ಬ್ರಹ್ಮಾನಂದ ಸ್ವಾಮಿಗಳು ಅಮೃತಹಸ್ತದಿಂದ ಜ್ಞಾನ ಯೋಗಾಶ್ರಮದಲ್ಲಿ ಔಷಧ ಸಸಿಗಳನ್ನು ನೆಡಲಾಯಿತು.

ನಾಟಿ ವೈದ್ಯ ಶ್ರೀಶೈಲ ಸಜ್ಜನ ಮಾತನಾಡಿ, ನಶಿಸುತ್ತಿರುವ ಸಸಿಗಳು ಹಾಗೂ ಅತ್ಯಂತ ಉಪಯುಕ್ತವಾದ ಸಸಿಗಳನ್ನು ಉಳಿಸಿ ಬೆಳಸಬೇಕು ಎಂದರು.

ನಿವೃತ್ತ ಡಿ.ಎಫ್.ಓ. ಮಹೇಶ ಕ್ಯಾತರ ಅವರು ಮಾತನಾಡಿ, ಕರ್ನಾಟಕ ರಾಜ್ಯ ಸರಕಾರ ಜೀವ ವೈವಿಧ್ಯ ಮಂಡಳಿ ರಚನೆ ಮಾಡಿದ್ದು ಈ ಮಂಡಳಿಗೆ ಹಾಗೂ ಅರಣ್ಯ ಹೆಚ್ಚಿನ ಅನುದಾನ ಕೊಟ್ಟು ಪ್ರಬೇಧಗಳ ಬಗ್ಗೆ ಸಂಶೋಧನೆ ವಹಿಸಿ ನಾಟಿ ವೈದ್ಯರಿಗೆ ಪ್ರೋತ್ಸಾಹಿಸುತ್ತಾ ಪ್ರತಿ ಜಿಲ್ಲೆಗಳಲ್ಲಿ ನಿರ್ವಹಣಾ ಸಮಿತಿಗಳನ್ನು ರಚಿಸುವಂತೆ ಅರಣ್ಯ ಸಚಿವರಿಗೆ ವಿನಂತಿಸಿದರು.

# ವಿವಿಧ ರಾಜ್ಯಗಳ 5 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ವೇಳಾಪಟ್ಟಿ ಪ್ರಕಟ

**ನವದೆಹಲಿ, ಮೇ26–** ವಿವಿಧ ರಾಜ್ಯಗಳಲ್ಲಿ ನಡೆಯಲಿರುವ ಐದು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಚುನಾವಣಾ ಆಯೋಗ ಇಂದು ವೇಳಾಪಟ್ಟಿಯನ್ನು ಪ್ರಕಟಿಸಿದೆ. ಅಧಿಕೃತ ಅಧಿಸೂಚನೆಯ ಪ್ರಕಾರ, ನಾಲ್ಕು ರಾಜ್ಯಗಳ ಉಪಚುನಾವಣೆಗೆ ಜೂನ್ 19ರಂದು ಮತದಾನ ನಡೆಯಲಿದೆ.

ಗುಜರಾತ್, ಕೇರಳ, ಪಂಜಾಬ್ ಮತ್ತು ಪಶ್ಚಿಮ ಬಂಗಾಳದಲ್ಲಿ ಜೂನ್ 23 ರಂದು ಮತಗಳ ಎಣಿಕೆ ನಡೆಯಲಿದೆ. ಮೇ 26ರಂದು ಗೆಜೆಟ್ ಅಧಿಸೂಚನೆ ಹೊರಡಿಸಲಾಗುವುದು ಎಂದು ಆಯೋಗ ತಿಳಿಸಿದೆ. ಜೂನ್ 2 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನಾಂಕವಾಗಿದ್ದು, ಜೂನ್ ನಾಮಪತ್ರ ಪರಿಶೀಲನೆಗೆ ಕೊನೆಯ ದಿನಾಂಕವಾಗಿದೆ.

ಅಭ್ಯರ್ಥಿಗಳು ನಾಮಪತ್ರ ಹಿಂಪಡೆಯಲು ಜೂನ್ 5 ಕೊನೆಯ ದಿನಾಂಕ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಕೇರಳದ ನೀಲಂಬೂರ್ ಕ್ಷೇತ್ರದಲ್ಲಿ ಉಪಚುನಾವಣೆ ನಡೆಯಲಿದೆ. ಪಿ.ವಿ. ಅನ್ವರ್ ಅವರ ರಾಜೀನಾಮೆಯಿಂದ ಉಪಚುನಾವಣೆ ನಡೆಯಲಿದೆ. ಅದರಂತೆ ಜೂನ್ 19ರಂದು, ಕಾಡಿ (ಗುಜರಾತ್), ವಿಸಾವದರ್ (ಗುಜರಾತ್), ಲುಧಿಯಾನ ಪಶ್ಚಿಮ (ಪಂಜಾಬ್) ಮತ್ತು ಕಾಳಿಗಂಜ್ (ಪಶ್ಚಿಮ ಬಂಗಾಳ) ದಲ್ಲಿ ನಡೆಯಲಿದೆ.

ಚುನಾವಣಾ ಆಯೋಗ ಬಿಡುಗಡೆ ಮಾಡಿದ ವೇಳಾಪಟ್ಟಿಯ ಪ್ರಕಾರ, ಲುಧಿಯಾನ ಪಶ್ಚಿಮದಲ್ಲಿ ಜೂನ್ 19, 2025 ರಂದು ಮತದಾನ ನಡೆಯಲಿದೆ. ಬೆಳಿಗ್ಗೆ 7ರಿಂದ ಸಂಜೆ 6ರವರೆಗೆ ಮತದಾನ ಪ್ರಕ್ರಿಯೆಯು ನಡೆಯಲಿದೆ.

ಈ ಉಪಚುನಾವಣೆ ಲುಧಿಯಾನ ಮಾತ್ರವಲ್ಲದೆ ಇಡೀ ಪಂಜಾಬ್‌ನ ಭವಿಷ್ಯದ ರಾಜಕೀಯದ ದಿಕ್ಕನ್ನು ನಿರ್ಧರಿಸಬಹುದು ಎಂದು ಹೇಳಲಾಗುತ್ತದೆ.

**ಬಿಹಾರ ಚುನಾವಣೆ**

ಅಕ್ಟೋಬರ್ ನವೆಂಬರ್ ತಿಂಗಳಲ್ಲಿ ಬಿಹಾರ ವಿಧಾನಸಭಾ ಚುನಾವಣೆ ನಡೆಯಬೇಕಿದೆ. 2025ರ ಬಿಹಾರ ವಿಧಾನಸಭಾ ಚುನಾವಣೆಯ ನಂತರ ಎನ್‌ಡಿಎ ಮತ್ತೆ ಅಧಿಕಾರಕ್ಕೆ ಬಂದರೆ ನಿತೀಶ್ ಕುಮಾರ್ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಬಿಜೆಪಿ ಮೈತ್ರಿಕೂಟ ಈಗಾಗಲೇ ತಿಳಿಸಿದೆ.ಪಿ.ವಿ.ಅನ್ವರ್ ರಾಜೀನಾವೆಯಿಂದಾಗಿ ನಿಲಂಬೂರು ಉಪಚುನಾವಣೆ ಅನಿವಾರ್ಯವಾಯಿತು. 2024ರಲ್ಲಿ ನಡೆದ 2021 ರ ವಿಧಾನಸಭಾ ಚುನಾವಣೆಯಲ್ಲಿ ನಿಲಂಬೂರಿನಿಂದ ಎಲ್‌ಡಿಎಫ್ ಬೆಂಬಲಿತ ಸ್ವತಂತ್ರ ಅಭ್ಯರ್ಥಿಯಾಗಿ ಗೆದ್ದ ಅನ್ವರ್, ಸಿಪಿಎಂ ಮತ್ತು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರೊಂದಿಗೆ ದೊಡ್ಡ ವಿವಾದವನ್ನು ಹೊಂದಿದ್ದರು. ಅವರು ಎಂ.ಆರ್.ಅಜಿತ್ ಕುಮಾರ್, ಸುಜಿತ್ ದಾಸ್ ಮತ್ತು ಪಿಣರಾಯಿ ಅವರ ರಾಜಕೀಯ ಕಾರ್ಯದರ್ಶಿಪಿ.ಕೆ.ಶಶಿ ಸೇರಿದಂತೆ ಉನ್ನತ ಐಪಿಎಸ್ ಅಧಿಕಾರಿಗಳ ವಿರುದ್ಧ ಹಲವಾರು ಆರೋಪಗಳನ್ನು ಹೊರಿಸಿದ್ದರು ಮತ್ತು ಮುಖ್ಯಮಂತ್ರಿಗೆ ದೂರುಗಳನ್ನು ಸಲ್ಲಿಸಿದ್ದರು.




ಲುಧಿಯಾನ ಪಶ್ಚಿಮ ಉಪಚುನಾವಣೆಗೆ ಕಾಂಗ್ರೆಸ್ ಸಜ್ಜಾಗಿದೆ. ಜನವರಿಯಲ್ಲಿ ಎಎಪಿ ಶಾಸಕ ಗುರುಪ್ರೀತ್ ಬಸ್ಸಿ ಗೋಗಿ ಅವರ ನಿಧನದ ನಂತರ ಲುಧಿಯಾನ ಪಶ್ಚಿಮ ಸ್ಥಾನ ತೆರವಾಗಿತ್ತು. ಇದಕ್ಕೂ ಮೊದಲು, ಫೆಬ್ರವರಿ 26ರಂದು, ಆಮ್ ಆಕ್ಟ್ ಪಕ್ಷವು ಲುಧಿಯಾನ ಪಶ್ಚಿಮ ಉಪಚುನಾವಣೆಗೆ ರಾಜ್ಯಸಭಾ ಸಂಸದ ಸಂಜೀವ್ ಅರೋರಾ ಅವರನ್ನು ತನ್ನ ಅಭ್ಯರ್ಥಿಯನ್ನಾಗಿ ಹೆಸರಿಸಿತ್ತು.

64–ಬುಧಿಯಾನ ಪಶ್ಚಿಮ ಕ್ಷೇತ್ರದಿಂದ ಪಂಜಾಬ್ ವಿಧಾನಸಭೆಗೆ ನಡೆಯಲಿರುವ ಉಪಚುನಾವಣೆಗೆ ಭರತ್ ಭೂಷಣ್ ಆಶು ಅವರನ್ನು ಪಕ್ಷದ ಅಭ್ಯರ್ಥಿಯಾಗಿ ಕಾಂಗ್ರೆಸ್ ಈ ಹಿಂದೆ ಘೋಷಿಸಿತ್ತು. ಆ ಸ್ಥಾನದಿಂದ ಉಪಚುನಾವಣೆಯಲ್ಲಿ ಸ್ಪರ್ಧಿಸಲು ಅವರ ಉಮೇದುವಾರಿಕೆಯನ್ನು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅನುಮೋದಿಸಿದ್ದಾರೆ. 64–ಬುಧಿಯಾನ ಪಶ್ಚಿಮ ಕ್ಷೇತ್ರದಿಂದ ಪಂಜಾಬ್ ವಿಧಾನಸಭೆಗೆ ನಡೆಯಲಿರುವ ಉಪಚುನಾವಣೆಗೆ ಪಕ್ಷದ ಅಭ್ಯರ್ಥಿಯಾಗಿ ಭರತ್ ಭೂಷಣ್ ಆಶು ಅವರ ಉಮೇದುವಾರಿಕೆಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅನುಮೋದನೆ ನೀಡಿದ್ದಾರೆ ಎಂದು ಎಐಸಿಸಿ ಪತ್ರಿಕಾ ಪ್ರಕಟಣೆ ತಿಳಿಸಿದೆ.

ಗುಜರಾತ್ ಕಾಂಗ್ರೆಸ್ ಅಧ್ಯಕ್ಷ ಶಕ್ತಿಸಿನ್ನ ಗೋಹಿಲ್ ಈ ಹಿಂದೆ ವಿಸಾವದರ್ ಮತ್ತು ಕಾಡಿ ವಿಧಾನಸಭಾ ಸ್ಥಾನಗಳಿಗೆ ನಡೆಯಲಿರುವ ಉಪಚುನಾವಣೆಯಲ್ಲಿ ಇಂಡಿಯಾ ಬ್ಲಾಕ್ ಮಿತ್ರ ಪಕ್ಷ ಆಮ್ ಆದ್ಮಿ ಪಕ್ಷ (ಎಎಪಿ) ಜೊತೆ ಪಾಲುದಾರಿಕೆ ಮಾಡಿಕೊಳ್ಳದೆ ಏಕಾಂಗಿಯಾಗಿ ಸ್ಪರ್ಧಿಸುವುದಾಗಿ ಘೋಷಿಸಿದ್ದರು. ರಾಜ್ಯದಲ್ಲಿನ ಹಿಂದಿನ ಚುನಾವಣಾ ಪ್ರವೃತ್ತಿಗಳನ್ನು ವಿಶ್ಲೇಷಿಸಿದ ನಂತರ ಈ ನಿರ್ಧಾರವನ್ನು ಸರ್ವಾನುಮತದಿಂದ ತೆಗೆದುಕೊಳ್ಳಲಾಗಿದೆ ಎಂದುಗೋಹಿಲ್ ಸ್ಪಷ್ಟಪಡಿಸಿದ್ದರು.

ಗುಜರಾತಿಗಳು ತೃತೀಯ ರಂಗಕ್ಕೆ ಎಂದಿಗೂ ಮತ ಹಾಕಿಲ್ಲ. ಇಲ್ಲಿ ಕಾಂಗ್ರೆಸ್ ಅಥವಾ ಬಿಜೆಪಿ ಇದೆ ಎಂದು ಅವರು ಹೇಳಿದರು. ಕಳೆದ ಚುನಾವಣೆಗಳಲ್ಲಿ, ಎಎಪಿ ತನ್ನ ಅತ್ಯುತ್ತಮ ಪ್ರಯತ್ನ ಮಾಡಿತು. ಎಎಪಿಯ ಎಲ್ಲಾ ದೊಡ್ಡ ನಾಯಕರು ಪಕ್ಷಕ್ಕಾಗಿ ಪ್ರಚಾರ ಮಾಡಿದರು. ಆದರೆ ಅವರು ಇನ್ನೂ ಶೇಕಡಾ 10.5–11ರಷ್ಟು ಮತಗಳನ್ನು ಮಾತ್ರ ಪಡೆಯುವಲ್ಲಿ ಯಶಸ್ವಿಯಾದರು ಮತ್ತು ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹಾನಿಯನ್ನುಂಟುಮಾಡಿದರು ಎಂದುಅವರು ಹೇಳಿದರು.

ಎಎಪಿ ಶಾಸಕ ಭೂಪೇಂದ್ರ ಭಯಾನಿ ರಾಜೀನಾಮೆ ನೀಡಿ ಬಿಜೆಪಿ ಸೇರಿದ ನಂತರ ಜುನಾಗಡ್ ಜಿಲ್ಲೆಯ ವಿಸಾವದರ್ ಸ್ಥಾನವು ಡಿಸೆಂಬರ್ 2023 ರಿಂದ ಖಾಲಿಯಾಗಿದೆ. ಏತನ್ಮಧ್ಯೆ, ಪರಿಶಿಷ್ಟ ಜಾತಿ (ಎಸ್‌ಸಿ) ಅಭ್ಯರ್ಥಿಗಳಿಗೆ ಮೀಸಲಾಗಿರುವ ಮೆಹಾನಾದ ಕಾಡಿ ಸ್ಥಾನವು ಫೆಬ್ರವರಿ 4ರಂದು ಬಿಜೆಪಿ ಶಾಸಕ ಕರ್ಸನ್ ಸೋಲಂಕಿ ಅವರ ನಿಧನದ ನಂತರ ತೆರವಾಗಿತ್ತು.

# ಅಕ್ರಮ ಸಿಲಿಂಡರ್ ಜಪ್ತಿ



ವಿಜಯಪುರ,ಮೇ.26:ಅಕ್ರಮವಾಗಿ ಗೃಹಬಳಕೆಯ ಸಿಲಿಂಡರ್‌ಗಳಿಂದ ವಾಣಿಜ್ಯ ಉದ್ದೇಶದ ಸಿಲಿಂಡರ್‌ಗಳಿಗೆ ರಿಫೀಲ್ ಮಾಡುತ್ತಿರುವ ಸ್ಥಳಕ್ಕೆ ಅಧಿಕಾರಿಗಳು ದಾಳಿ ನಡೆಸಿ ಸಿಲಿಂಡರ್‌ಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

ಶನಿವಾರ ವಿಜಯಪುರ ನಗರದ ಬಾಟರ ಓಣಿಯ ಹತ್ತಿರ ಗೃಹ ಬಳಕೆಯ ಅಡುಗೆ ಅನಿಲ ಸಿಲಿಂಡರ್‌ಗಳಿಂದ ವಾಣಿಜ್ಯ ಉದ್ದೇಶದ ಸಿಲಿಂಡರ್‌ಗಳಿಗೆ ರೀಪಿಲ್ ಮಾಡುತ್ತಿರುವ ಸ್ಥಳದ ಮೇಲೆ ಆಹಾರ ಇಲಾಖೆಯ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ದಾಳಿ ಮಾಡಿ 20 ತುಂಬಿದ ಅಡುಗೆ ಅನಿಲ ಸಿಲಿಂಡರ್‌ಗಳನ್ನು, 6 ವಾಣಿಜ್ಯ ಉದ್ದೇಶದ ಖಾಲಿ ಸಿಲಿಂಡರ್‌ಗಳನ್ನು ಹಾಗೂ ರಿಪಿಲ್ ಮಾಡಲು ಬಳಸುತ್ತಿದ್ದ ಮೋಟಾರು ಮತ್ತು ತೂಕದ ಯಂತ್ರವನ್ನು ವಶಪಡಿಸಿಕೊಂಡು ಆದರ್ಶನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಆಹಾರ ನಿರೀಕ್ಷಕ ವಿಜಕುಮಾರ ಗುಮಶೆಟ್ಟಿ ಅವರ ನೇತೃತ್ವದ ದಾಳಿಯಲ್ಲಿ ಆದರ್ಶ ನಗರ ಪಿಎಸ್‌ಐ ರೇಣುಕಾ ದಿನ್ನಿ, ಆಹಾರ ಮತ್ತು ಪೊಲೀಸ್ ಇಲಾಖೆಯ ಸಿಬ್ಬಂದಿ ಭಾಗವಹಿಸಿದ್ದರು ಎಂದು ಆಹಾರ ಇಲಾಖೆಯ ಉಪ ನಿರ್ದೇಶಕ ವಿನಯಕುಮಾರ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಂದೇ ಕುಟುಂಬದ ಮೂವರು ಕೆರೆಗೆ ಹಾರಿ ಆತ್ಮಹತ್ಯೆ

ಹೆಚ್ ಡಿ.ಕೋಟೆ, ಮೇ.26– ಮರ್ಯಾದೆಗೆ ಅಂಜಿ ಒಂದೇ ಕುಟುಂಬದ ಮೂವರು ಕೆರೆಗೆ ಹಾರಿ ಆತ್ಮಹತ್ಯೆಗೆ ಮಾಡಿಕೊಂಡಿರುವ ದಾರುಣ ಘಟನೆ ತಾಲೂಕಿನ ಬೂದನೂರು ಗ್ರಾಮದಲ್ಲಿ ನಡೆದಿದೆ. ಮಹದೇವಸ್ವಾಮಿ ಅವರ ಪತ್ನಿ ಮಂಜುಳಾ ಹಾಗೂ ಕಿರಿಯ ಮಗಳು ಹರ್ಷಿತಾ ಮೃತ ದುರ್ದೈವಿಗಳು.

ಮೂವರು ಕಾಲುಗಳಿಗೆ ಹಗ್ಗ ಕಟಿಕೊಂಡು ಕೆರೆಗೆ ಹಾರಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮಹದೇವಸ್ವಾಮಿ ಅವರಿಗೆ ಅರ್ಪಿತಾ ಹಾಗೂ ಹರ್ಷಿತಾ ಎಂಬ ಇಬ್ಬರು ಹೆಣ್ಣುಮಕ್ಕಳು. ಮೈಸೂರಿನವರಾದ ಮಹದೇವಸ್ವಾಮಿ ಅವರು ಕುಟುಂಬ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹೆಚ್‌ಡಿ.ಕೋಟೆಯಲ್ಲಿ ವಾಸವಿದ್ದರು.

ಸ್ವಂತ ಮನೆ ಖರೀದಿ ಸುಖಿ ಸಂಸಾರ ನಡೆಸುತ್ತಿದ್ದರು. ಹಿರಿಯ ಮಗಳು ಅರ್ಪಿತಾ ಮೈಸೂರಿನಲ್ಲಿ ಕಾನೂನು ಪದವಿ ಓದುತ್ತಿದ್ದಳು. ಎರಡನೇ ಮಗಳು ಬಿ.ಸಿ.ಎ ವ್ಯಾಸಂಗ ಮಾಡುತ್ತಿದ್ದಳು. ಅರ್ಪಿತಾ ಮೈಸೂರಿನಲ್ಲಿ ಅನ್ಯಜಾತಿಯ ಹುಡುಗನ ಜೊತೆ ಪ್ರೀತಿಗೆ ಬಿದ್ದು, ಆತನನ್ನೇ ಮದುವೆ ಆಗುವುದಾಗಿ ಪಟ್ಟು ಹಿಡಿದಿದ್ದಳು. ತಂದೆ ಮಹದೇವಸ್ವಾಮಿ ಸಮುದಾಯದ ಜನರಿಗೆ ಹೆದರಿ ಮದುವೆ ನಿರಾಕರಿಸಿದ್ದರು.

ಇದರಿಮದಾಗಿ ಅರ್ಪಿತಾ ಮನೆ ಬಿಟ್ಟು ತೆರಳಿದ್ದಳು. ಇದನ್ನು ತಿಳಿದು ಮರ್ಯಾದೆ ಹೋಯಿತು ಎಂದು ಭಾವಿಸಿ ಮಹದೇವಸ್ವಾಮಿ, ಪತ್ನಿ ಹಾಗೂ ಕಿರಿಯ ಮಗಳ ಸಮೇತ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಸುದ್ದಿ ತಿಳಿದು ಗ್ರಾಮಸ್ಥರು ಕೆರೆ ಬಳಿ ಜಮಾಯಿಸಿದ್ದರು.ರಾತ್ರಿ ಮೃತ ದೇಹ ನೀರಿನಿಂದ ಮೇಲೆತ್ತಿ ಆಸ್ಪತ್ರೆಗೆ ಸಾಗಿಸಲಾಗಿದೆ. ಮಗ, ಸೊಸೆ ಹಾಗೂ ಮೊಮ್ಮಗಳ ಸಾವಿನಿಂದ ದಿಕ್ಕೇ ತೋಚದಂತೆ ಕುಳಿತ ವೃದ್ಧ ತಂದೆ– ತಾಯಿ ಕಣ್ಣೀರ ಕೋಡಿ ಹರಿಸಿದ್ದಾರೆ.

ಮರಣೋತ್ತರ ಪರೀಕ್ಷೆ ನಂತರ ಮಹದೇವಸ್ವಾಮಿ ಅವರ ಜಮೀನಲ್ಲೇ ಒಂದೇ ಚಿತೆಯಲ್ಲಿ ಸಾಲಾಗಿ ಮಲಗಿಸಿ ಅಂತ್ಯಸಂಸ್ಕಾರವನ್ನು ಗ್ರಾಮಸ್ಥರು ನೆರವೇರಿಸಿದ್ದಾರೆ. ಹೆಚ್ ಡಿ.ಕೋಟೆ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಮುಜರಾಯಿ ಇಲಾಖೆಯ ವಿಧೇಯಕ ಕುರಿತು ಚರ್ಚೆ ಮಾಡಿ ಸೂಕ್ತ ನಿರ್ಧಾರ

**ಬೆಂಗಳೂರು,ಮೇ26–**ಮುಜರಾಯಿ ಇಲಾಖೆಯ ವಿಧೇಯಕವನ್ನು ರಾಜ್ಯಪಾಲರು, ರಾಷ್ಟ್ರಪತಿಗಳಿಗೆ ಕಳುಹಿಸಲು ತೀರ್ಮಾನಿಸಿದ್ದು, ಈ ಬಗ್ಗೆ ನಾಳೆ ಚರ್ಚೆ ಮಾಡಿ ಸೂಕ್ತ ನಿರ್ಧಾರ ಕೈಗೊಳ್ಳುತ್ತೇವೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯನ್ನು ನಡೆಸಲಾಗುವುದು. ರಾಜ್ಯಪಾಲರು ವಿಧೇಯಕವನ್ನು ರಾಷ್ಟ್ರಪತಿಗಳಿಗೆ ಕಳುಹಿಸಲು ತೀರ್ಮಾನಿಸಿರುವ ಕುರಿತಂತೆ ಮುಂದೇನು ಮಾಡಬೇಕು ಎಂಬ ಬಗ್ಗೆ ಚರ್ಚೆ ಮಾಡಲಾಗುವುದು ಎಂದರು.

ಮುಜರಾಯಿ ಸಚಿವರಾಗಿರುವ ರಾಮಲಿಂಗಾರೆಡ್ಡಿ ಅವರೊಂದಿಗೂ ವಿಧೇಯಕದ ವಿಚಾರವಾಗಿ ಚರ್ಚೆ ಮಾಡಿ ಸೂಕ್ತ ತೀರ್ಮಾನ ಮಾಡುತ್ತೇವೆ. ಬಹಳಷ್ಟು ವಿಚಾರಗಳು ಸಭೆಯಲ್ಲಿ ಚರ್ಚೆ ಮಾಡಲಾಗುತ್ತದೆ. ಎಲ್ಲವನ್ನು ಬಹಿರಂಗಗೊಳಿಸುವುದಿಲ್ಲ. ವಿಧಾನಮಂಡಲದ ಉಭಯ ಸದನಗಳು ಅಂಗೀಕರಿಸಿರುವ ಹಲವು ವಿಧೇಯಕಗಳು ಈಗಾಗಲೇ ರಾಜ್ಯಪಾಲರ ಒಪ್ಪಿಗೆ ಪಡೆದಿವೆ. ಹೀಗಾಗಿ ರಾಜ್ಯಪಾಲರ ನಡೆಯನ್ನು ವಿರೋಧಿಸುವಂಥದ್ದು ಏನೂ



ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**